ಕನ್ನಡ ದಿನಪತ್ರಿಕೆ
07 ಮಾರ್ಚ | ಗುರುವಾರ
07 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 17 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ದೇಶದ ಮೊದಲ ನೀರೊಳಗಿನ ಮೆಟ್ರೋಗೆ ಪ್ರಧಾನಿ ಮೋದಿ ಚಾಲನೆ



ಕೊಲ್ಕತ್ತಾ: ಕೊಲ್ಕತ್ತಾದಲ್ಲಿ ದೇಶದ ಮೊದಲ ನೀರೊಳಗಿನ ಮೆಟ್ರೋ ಆರಂಭವಾಗಿದ್ದು , ಬುಧವಾರ ಪ್ರಧಾನಿ ಮೋದಿ ಚಾಲನೆ ನೀಡಿದ್ದಾರೆ. ಶಾಲಾ ಮಕ್ಕಳೊಂದಿಗೆ ಪ್ರಯಾಣಿಸುವ ಮೂಲಕ ಮೆಟ್ರೋ ಮಾರ್ಗವನ್ನು ಉದ್ಘಾಟಿಸಿದ್ದಾರೆ.

ಪೂರ್ವ–ಪಶ್ಚಿಮ ಮೆಟ್ರೋದ 4.8 ಕಿಮೀ ವಿಸ್ತರಣೆಯನ್ನು ಹೊಂದಿರುವ ಮೆಟ್ರೋವನ್ನು 4,965 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ನೆಲಮಟ್ಟದಿಂದ ಸುಮಾರು 30 ಕಿಮೀ ಕೆಳಗೆ ಮೆಟ್ರೋ ಹೋಗುತ್ತದೆ.

## 5,8,9,11 ನೇ ತರಗತಿಗಳ ಬೋರ್ಡ್ ಪರೀಕ್ಷೆ ರದ್ದು: ಹೈಕೋರ್ಟ್



ಬೆಂಗಳೂರು: ರಾಜ್ಯ ಪಠ್ಯಕ್ರಮ ಅನುಸ–ರಿಸುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿನ 5,8,9,11ನೇ ತರಗತಿಗಳ ಬೋರ್ಡ್ ಪರೀಕ್ಷೆಯನ್ನು ರದ್ದು ಮಾಡಿ ಹೈಕೋರ್ಟ್ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರ 5,8,9,11 ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಿಗದಿಪಡಿಸಿತ್ತು. ಸರ್ಕಾರದ ಸುತ್ತೋಲೆಯನ್ನು ಪ್ರಶ್ನಿಸಿ ಅನುದಾನರಹಿತ ಶಾಲೆಗಳ ಸಂಘ ಹೈಕೋರ್ಟ್ನಲ್ಲಿ ರಿಟ್ ಅರ್ಜಿ ಸಲ್ಲಿಸಿತ್ತು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಪೀಠ 5,8,9,11 ನೇ ತರಗತಿಗಳ ಬೋರ್ಡ್ ಪರೀಕ್ಷೆಯನ್ನು ರದ್ದು ಮಾಡಿದೆ.

## ವಿಧಾನಸೌಧದಲ್ಲಿ ಭದ್ರತೆ ಹೆಚ್ಚಳ




ಬೆಂಗಳೂರು: ನಗರದ ರಾಮೇಶ್ವರಂ ಕೆಫೆ ಬಾಂಬ್ ಸೋಟ ಪ್ರಕರಣದ ನಂತರ ಆಡಳಿತದ ಶಕ್ತಿ ಕೇಂದ್ರಗಳಾದ ವಿಧಾನಸೌಧ, ವಿಕಾಸಸೌಧದ ಭದ್ರತೆಯನ್ನು ತೀವ್ರಗೊಳಿಸಲಾಗಿದೆ.

ವಿಧಾನಸೌಧ, ವಿಕಾಸಸೌಧ ಪ್ರವೇಶಿಸುವ ದ್ವಾರಗಳಲ್ಲಿ ಅಧಿಕಾರಿ, ಸಿಬ್ಬಂದಿ ಹಾಗೂ ಸಾರ್ವಜನಿಕರನ್ನು ತೀವ್ರ ತಪಾಸಣೆಗೊಳಪಡಿಸಿ ಪೊಲೀಸರು ಒಳಪ್ರವೇಶಿಸಲು ಅವಕಾಶ ಮಾಡಿಕೊಡುತ್ತಿದ್ದಾರೆ. ಪ್ರವೇಶದ್ವಾರದಲ್ಲೇ ಬ್ಯಾಗ್ಗಳನ್ನು ಪರಿಶೀಲನೆ ಮಾಡಿದ ನಂತರ ಒಳಹೋಗಲು ಅವಕಾಶ ಮಾಡಿಕೊಡಲಾಗುತ್ತಿದೆ.

ಎರಡು ಸೌಧಗಳ ನಾಲ್ಕು ದಿಕ್ಕಿನಲ್ಲಿರುವ ಪ್ರವೇಶ ದ್ವಾರಗಳಲ್ಲಿ ಲೋಹ ಶೋಧದ ಮೂಲಕ ಪರಿಶೀಲನೆ ಮಾಡಲಾಗುತ್ತಿದೆ. ಬ್ಯಾಗ್ಗಳನ್ನು ಕಡ್ಡಾಯವಾಗಿ ಸ್ಕ್ಯಾನ್ ಮಾಡಿದ ನಂತರ ಒಳಪ್ರವೇಶಿಸಲು ಅವಕಾಶ ಮಾಡಿಕೊಡಲಾಗುತ್ತಿದೆ. ಪರಿಚಯಸ್ಥರು, ಅಧಿಕಾರಿ, ಸಿಬ್ಬಂದಿ ಎಂಬ ಯಾವ ಸಡಿಲಿಕೆಯೂ ಇಲ್ಲದೆ ಕಟ್ಟುನಿಟ್ಟಿನ ತಪಾಸಣೆಯನ್ನು ಮಾಡಲಾಗುತ್ತಿದೆ.

## ಯುವತಿಯಿಂದ 9 ಲಕ್ಷ ಹಣ ದೋಚಿದ ಸೈಬರ್ ವಂಚಕರು



ತುಮಕೂರು: ಮಹಿಳೆಯೊಬ್ಬರಿಗೆ ಸೈಬರ್ ವಂಚಕರು ಬರೋಬ್ಬರಿ 9.26 ಲಕ್ಷ ವಂಚಿಸಿರುವ ಘಟನೆ ನಗರದ ಚಿಕ್ಕಪೇಟೆಯಲ್ಲಿ ನಡೆದಿದೆ.

ನಗರದ ಚಿಕ್ಕಪೇಟೆಯ ಪಿ.ಜೆ.ಪವಿತ್ರಾ ನಾಗು ಎಂಬ ಯುವತಿಗೆ ಸೈಬರ್ ಕಳ್ಳರು 9.26 ಲಕ್ಷ ವಂಚಿಸಿದ್ದಾರೆ. ಪವಿತ್ರಾ ಅವರನ್ನು ವಾಟ್ಸ್ ಆಯಪ್ ಮುಖಾಂತರ ಪರಿಚಯಿಸಿಕೊಂಡು, ಗೂಗಲ್ ಪ್ರಮೋಷನ್ನಿಂದ ಚಾಟಿಂಗ್ ಮಾಡುತ್ತಿರುವುದಾಗಿ ತಿಳಿಸಿದ್ದಾರೆ. ಲಿಂಕ್ ಕಳುಹಿಸಿ ಜಾಹೀರಾತುಗಳಿಗೆ ರೇಟಿಂಗ್ ನೀಡಿದರೆ ಹಣ ಕೊಡುವುದಾಗಿ ನಂಬಿಸಿದ್ದಾರೆ. 5 ಸ್ಟಾರ್ ರೇಟಿಂಗ್ ನೀಡಿದ ನಂತರ ಅವರ ಬ್ಯಾಂಕ್ ವಿವರ ಪಡೆದು 203 ಜಮಾ ಮಾಡಿದ್ದಾರೆ. ನಂತರ ಟೆಲಿಗ್ರಾಂ ಮೂಲಕ ಲಿಂಕ್ ಕಳುಹಿಸಿ ರೇಟಿಂಗ್ ನೀಡಿ, ಸ್ಕ್ರೀನ್ ಶಾರ್ಟ್ ಕಳುಹಿಸಿದರೆ ಆಯಾ ದಿನದ ಲಾಭವನ್ನು ಅಂದೇ ವರ್ಗಾವಣೆ ಮಾಡಲಾಗುವುದು ಎಂದು ಹೇಳಿದ್ದಾರೆ. ಟಾಸ್ಕ್ ಮೇಲೆ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಗಳಿಸಬಹುದು ಎಂದೂ ತಿಳಿಸಿದ್ದಾರೆ.

ಇದನ್ನು ನಂಬಿ ಸೈಬರ್ ವಂಚಕರು ಹೇಳಿದ ವಿವಿಧ ಯುಪಿಐ ಐಡಿ ಮತ್ತು ಬ್ಯಾಂಕ್ ಖಾತೆಗಳಿಗೆ ಪವಿತ್ರಾ ತಮ್ಮ ಖಾತೆ ಮತ್ತು ಅವರ ತಾಯಿ, ಸ್ನೇಹಿತರ ಖಾತೆಗಳಿಂದ ಫೆ. 26ರಿಂದ 29ರ ವರೆಗೆ ಒಟ್ಟು 9,26,923 ವರ್ಗಾವಣೆ ಮಾಡಿದ್ದಾರೆ. ಆದರೆ ಅವರಿಗೆ ಯಾವುದೇ ಹಣ ಹಿಂದಿರುಗಿಸಿಲ್ಲ. 'ಹಣ ವರ್ಗಾವಣೆ ಮಾಡಿಸಿಕೊಂಡು ವಾಪಸ್ ಕೊಡದೆ ವಂಚಿಸಿದವರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಕೋರಿ ಪವಿತ್ರಾ ಸೈಬರ್ ಠಾಣೆಗೆ ದೂರು ನೀಡಿದ್ದಾರೆ.

## ಕಾಂಗ್ರೆಸ್ ಅಭಿವೃದ್ಧಿ ನೋಡಿ ಬಿಜೆಪಿಯವರಿಗೆ ಭ್ರಮನಿರಸನವಾಗಿದೆ: ಲಕ್ಷ್ಮೀ ಹೆಬ್ಬಾಳಕರ್



ಅಥಣಿ: ಕಾಂಗ್ರೆಸ್ ಸರಕಾರ ಗ್ಯಾರಂ–ಟಿಯ ಜೊತೆಗೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದರೂ ಬಿಜೆಪಿಯವರ ಕಣ್ಣಿಗೆ ಇದೆಲ್ಲ ಕಾಣುತ್ತಿಲ್ಲವೇ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದ್ದಾರೆ.

ಅಥಣಿಯಲ್ಲಿ ಬುಧವಾರ ಅಮ್ಮಾಜೇಶ್ವರಿ ಏತ ನೀರಾವರಿ ಯೋಜನೆ ಉದ್ಘಾಟನೆ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕಾಂಗ್ರೆಸ್ ಎಂದರೆ ಬದ್ಧತೆ, ಬಸವಣ್ಣನವರು ಕಂಡ ಸಮಾನತೆಯ ಕನಸನ್ನು ನನಸು ಮಾಡುವ ಪಕ್ಷ. ಆದರೆ ಬಿಜೆಪಿಯವರು ನಮ್ಮ ಗ್ಯಾರಂಟಿಗಳ ಬಗ್ಗೆ ಬಹಳಷ್ಟು ಕೀಳಾಗಿ ಮಾತನಾಡಿದರು. ಗ್ಯಾರಂಟಿ ಸುಳ್ಳು ಎಂದರು, ಗ್ಯಾರಂಟಿಯಿಂದ ಮಹಿಳೆಯರು ದೇವಸ್ಥಾನಗಳಿಗೆ ತಿರುಗುತ್ತಿದ್ದಾರೆ, ಗಂಡಸರು ಕುಡಿದು ಹಾಳಾಗುತ್ತಿದ್ದಾರೆ ಎಂದು ಅವಮಾನ ಮಾಡಿದರು. ಆದರೆ ಮಹಿಳಾ ಸ್ವಾವಲಂಬನೆ ಕಾಂಗ್ರೆಸ್ ಬದ್ಧತೆ. ಅದನ್ನು ಅತ್ಯಂತ ಸಮರ್ಥ–ವಾಗಿ ಈಡೇರಿಸಿದ್ದೇವೆ ಎಂದು ಅವರು ಹೇಳಿದರು.


1.20 ಕೋಟಿ ಮನೆಯ ಯಜಮಾನಿಯರು ಗೃಹಲಕ್ಷ್ಮೀ ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಎಲ್ಲ 5 ಗ್ಯಾರಂಟಿಗಳನ್ನು ಈಡೇರಿಸಿ ಕಾಂಗ್ರೆಸ್ ಪಕ್ಷ ಜನಪ್ರಿಯತೆ ಪಡೆಯುತ್ತಿರುವುದನ್ನು ಬಿಜೆಪಿಯವರಗೆ ಸಹಿಸಿಕೊಳ್ಳಲು ಆಗುವುದಿಲ್ಲ. 5 ಗ್ಯಾರಂಟಿ ಯೋಜನೆಗೆ ತಿಂಗಳಿಗೆ 5 ಸಾವಿರ ಕೋಟಿ ರೂ ನೀಡಲಾಗುತ್ತಿದೆ. ಜೊತೆಗೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಅಭಿವೃದ್ಧಿ ಯೋಜನೆಗಳನ್ನು ಜಾರಿಗೊಳಿಸುತ್ತಿರುವುದು ಬಿಜೆಪಿಯವರಿಗೆ ಕಣ್ಣಿಗೆ ಕಾಣುತ್ತಿಲ್ಲ. ಅವರಿಗೆ ಭ್ರಮನಿರಸನವಾಗಿದೆ ಎಂದು ಹೆಬ್ಬಾಳಕರ್ ಹೇಳಿದರು.

ಕೇವಲ ಶ್ರೀಮಂತರು ಶ್ರೀಮಂತರಾದರೆ ರಾಷ್ಟ್ರ ಬೆಳೆಯುವುದಿಲ್ಲ. ಬಡವರ ಹೊಟ್ಟೆ ತುಂಬಬೇಕು, ಬಡವರು ಸ್ವಾವಲಂಬಿ ಜೀವನ ನಡೆಸಬೇಕು. ಅಂತಹ ಅವಕಾಶವನ್ನು ಕಾಂಗ್ರೆಸ್ ಸರಕಾರ ನೀಡುತ್ತಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಲಕ್ಷ್ಮಣ ಸವದಿಯವರು ತಮ್ಮ ಕ್ಷೇತ್ರದ ಜನರಿಗೆ ನೀರಾವರಿ ಯೋಜನೆ ಬೇಕೆನ್ನುವ ಬೇಡಿಕೆಯನ್ನು ಮಾತ್ರ ಕಾಂಗ್ರೆಸ್ ಸೇರುವಾಗ ಇಟ್ಟಿದ್ದರು. ಅದರಂತೆ ಈಗ 1486 ಕೋಟಿ ರೂ.ಗಳ ಈ ಅಮ್ಮಾಜೇಶ್ವರಿ ಏತ ನೀರಾವರಿ ಯೋಜನೆ ಮಂಜೂರಾಗಿದೆ. ನನ್ನ ಕ್ಷೇತ್ರಕ್ಕೆ ಕೂಡ 800 ಕೋಟಿ ರೂ.ಗಳ ಯೋಜನೆ ಮಂಜೂರು ಮಾಡಲಾಗಿದೆ. 2018ರಲ್ಲೇ ಯೋಜನೆ ಮಂಜೂರಾಗಿತ್ತು. ಆದರೆ ನಂತರ ಬಂದ ಸರಕಾರ ನನಗೆ ಹೆಸರು ಬರುತ್ತದೆ ಎಂದು ಹೇಳಿ ನನ್ನ ಕ್ಷೇತ್ರದ ಯೋಜನೆ ತಡೆದಿದ್ದರು. ಈಗ ಮತ್ತೆ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ ಅವರು ಯೋಜನೆಗೆ ಮಂಜೂರಾತಿ ನೀಡಿದ್ದಾರೆ. ಅವರಿಗೆ ನಾನು ಕೋಟಿ ಕೋಟಿ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದ ಅವರು, ಬರುವ ಲೋಕಸಭಾ ಚುನಾವಣೆಯಲ್ಲಿ ನಮಗೆ ಆಶೀರ್ವಾದ ಮಾಡಿ ಎಂದು ಕೋರಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏತ ನೀರಾವರಿ ಯೋಜನೆಯನ್ನು ಉದ್ಘಾಟಿಸಿದರು. ಶಾಸಕರಾದ ಲಕ್ಷ್ಮಣ್ ಎಂ ಸವದಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಡಿಸಿಎಂ ಹಾಗೂ ಬೃಹತ್ ನೀರಾವರಿ ಸಚಿವರಾದ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಕೈಗಾ–ರಿಕಾ ಸಚಿವರಾದ ಎಂ.ಬಿ.ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಬ ಹಟ್ಟಿಹೊಳಿ, ಮಾಜಿ ಶಾಸಕಿ ಅಂಜಲಿ ನಿಂಬಾಳ್ಕರ್, ಶಾಸಕರಾದ ಮಹೇಂದ್ರ ತಮ್ಮಣ್ಣವರ, ಅಶೋಕ ಮ ಪಟ್ಟಣ, ಮಹಾರಾಷ್ಟ್ರದ ಮಾಜಿ ಸಚಿವ ವಿಶ್ವಜಿತ್ ಕದಂ ಸೇರಿ ಹಲವು ನಾಯಕರು ವೇದಿಕೆಯಲ್ಲಿದ್ದರು.

## ರಾಜ್ಯದ 137 ಧಾರ್ಮಿಕ ಸಂಸ್ಥೆಗಳಿಗೆ 786.50 ಲಕ್ಷ ರೂ.ಬಿಡುಗಡೆ



ಬೆಂಗಳೂರು: ರಾಜ್ಯದ 137 ಧಾರ್ಮಿಕ ಸಂಸ್ಥೆಗಳಿಗೆ 786.50 ಲಕ್ಷ ರೂ.ಗಳನ್ನು ಸರ್ಕಾರ ಬಿಡುಗಡೆ ಮಾಡಿ ಆದ–ೇಶ ಹೊರಡಿಸಿದೆ. ಧಾರ್ಮಿಕ ಸ್ಥಳಗಳಲ್ಲಿ ಮೂಲಭೂತ ಸೌಕರ್ಯ ಹಾಗೂ ವಸತಿ ವ್ಯವಸ್ಥೆ 386 ನಿರ್ಮಾಣದಡಿಯಲ್ಲಿ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿ ಇಲಾಖೆ ಆಯುಕ್ತರಿಗೆ ಷರತ್ತುಗೊಳಪಟ್ಟು ಅನುದಾನ ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಕಂದಾಯ ಇಲಾಖೆ ಆದೇಶ ಹೊರಡಿಸಿದೆ.

ವಿವಿಧ ಗಣ್ಯರು, ಸಾರ್ವಜನಿಕರು, ಸಂಘ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳಿಂದ ಅನುದಾನ ಕೋರಿ ಸ್ವೀಕೃತವಾದ ಪ್ರಸ್ತಾವನೆಗಳನ್ನು ಧಾರ್ಮಿಕ ದತ್ತಿ ಇಲಾಖೆ ಆಯುಕ್ತರು ಪರಿಶೀಲಿಸಿ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರು.ಪ್ರಸಕ್ತ ಆರ್ಥಿಕ ಸಾಲಿನಲ್ಲಿ ದುರಸ್ಥಿ, ಜೀರ್ಣೋದ್ಧಾರ, ನಿರ್ಮಾಣ ಯೋಜನೆಯಡಿಯಲ್ಲಿ ವಿವಿಧ ಜಿಲ್ಲೆಗಳ ದೇವಸ್ಥಾನ, ಮಠ, ಸಂಘ ಸಂಸ್ಥೆಗಳ ದುರಸ್ಥಿ, ಜೀರ್ಣೋದ್ಧಾರ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರವನ್ನು ಆಯುಕ್ತರು ಕೋರಿದ್ದರು.

ಈ ಹಿನ್ನೆಲೆಯಲ್ಲಿ ಕಂದಾಯ ಇಲಾಖೆ ಕೆಲವು ಷರತ್ತುಗಳನ್ನ ವಿಸಿ ಅನುದಾನ ಬಿಡುಗಡೆಗೆ ಮಂಜೂರಾತಿ ನೀಡಿದೆ. ಧಾರ್ಮಿಕ ದತ್ತಿ ಇಲಾಖೆ ಆಯುಕ್ತರು ಧಾರ್ಮಿಕ ಸಂಸ್ಥೆಗಳಿಗೆ ಮಂಜೂರು ಮಾಡಲಾದ ಅನುದಾನವನ್ನು ಖಜಾನೆ–2 ರ ಮೂಲಕ ಜಿಲ್ಲಾಕಾರಿಗಳ ಡಿಡಿಓ ಸಂಕೇತಕ್ಕೆ ಅಪ್ಲೋಡ್ ಮಾಡುವುದು, ಜಿಲ್ಲಾಕಾ–ರಿಗಳು ನಿಯಮಾನುಸಾರ ಈ ಅನುದಾನವನ್ನು ಡ್ರಾ ಮಾಡಲು ಕ್ರಮ ವಹಿಸಬೇಕು.

ಅನುದಾನ ಬಿಡುಗಡೆ ಮಾಡಿರುವ ಸಂಸ್ಥೆಯು ನಿಯಮಾನುಸಾರ ನೀಡಬಹುದಾದ ಮೊತ್ತವನ್ನು ಮುಂಗಡ ರಸೀದಿ ಪಡೆದು ಬಿಲ್ ಪಾವತಿಸಬೇಕು ಎಂಬುದು ಸೇರಿದಂತೆ ಕೆಲವು ಷರತ್ತುಗಳನ್ನು ಆದೇಶದಲ್ಲಿ ವಿಸಲಾಗಿದೆ. 2 ಲಕ್ಷದಿಂದ 50 ಲಕ್ಷ ರೂ.ವರೆಗೂ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ರಾಮದುರ್ಗದ ಶಿವಪ್ರತಿಷ್ಠಾಪನಾ ಸೇವಾ ಸಮಿತಿಗೆ 50 ಲಕ್ಷ ರೂ. ಮಂಜೂರು ಮಾಡಲಾಗಿದೆ.

## ಮಾಜಿ ಸಚಿವ ಹೆಬ್ಬಾರ್ ಒಬ್ಬರೇ ಅಲ್ಲ, ಇನ್ನಷ್ಟು ಜನ ಕಾಂಗ್ರೆಸ್‌ಗೆ ಸೇರಲಿದ್ದಾರೆ: ಡಿ.ಕೆ.ಶಿವಕುಮಾರ್



ಹುಬ್ಬಳ್ಳಿ: ಮಾಜಿ ಸಚಿವ ಶಿವರಾಮ್ ಹೆಬ್ಬಾರ್ ಬಿಜೆಪಿ ತೊರೆದು ಕಾಂಗ್ರೆಸ್ ಸೇರುವಂತೆ ಆಹ್ವಾನ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅವರೊಬ್ಬರೇ ಅಲ್ಲ. ಇನ್ನೂ ಸಾಕಷ್ಟು ಜನ ಬಿಜೆಪಿ ಮತ್ತು ಜೆಡಿಎಸ್ ತೊರೆದು ಕಾಂಗ್ರೆಸ್ ಸೇರಲಿದ್ದಾರೆ ಎಂದು ಸುಳಿವು ನೀಡಿದರು.

ಬುಧವಾರ ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಪ್ರತಿಕ್ರಿಯಿಸಿದ ಅವರು, ಯಾರು ಯಾರು ಕಾಂಗ್ರೆಸ್ ಸೇರುತ್ತಿದ್ದಾರೋ, ಅವರ ಹೆಸರುಗಳನ್ನು ಸದ್ಯಕ್ಕೆ ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದರು.

ಲೋಕಸಭಾ ಚುನಾವಣೆ ಮುಂದಿರುವಂತೆಯೇ ಪಕ್ಷಾಂತರ ಪರ್ವದ ಸುಳಿವು ನೀಡಿದ ಡಿ.ಕೆ. ಶಿವಕುಮಾರ್, ಸ್ಥಳೀಯ ಕಾರ್ಯಕರ್ತರನ್ನೂ ಸಹ ಪಕ್ಷಕ್ಕೆ ಸ್ವಾಗತಿಸುವಂತೆ ಮುಖಂಡರಿಗೆ ಸೂಚನೆ ನೀಡಿದ್ದೇನೆ ಎಂದು ಹೇಳಿದರು.

ಉತ್ತರ ಕನ್ನಡದಲ್ಲಿ ಲೋಕಸಭಾ ಚುನಾವಣಾ ಅಭ್ಯರ್ಥಿಯ ಬಗ್ಗೆ ಇಂದು ಸ್ಥಳೀಯ ನಾಯಕರು, ಶಾಸಕರು ಹಾಗೂ ಸಚಿವರೊಂದಿಗೆ ಡಿ.ಕೆ. ಶಿವಕುಮಾರ್ ಚರ್ಚೆ ನಡೆಸಲಿದ್ದಾರೆ. ಬಿಜೆಪಿಯಿಂದ ಅನಂತ್ ಕುಮಾರ್ ಹೆಗಡೆ ಸ್ಪರ್ಧಿಸುತ್ತಿರುವುದರಿಂದ ಪ್ರಭಾವಿ ನಾಯಕರನ್ನೇ ಕಾಂಗ್ರೆಸ್ ಕಣಕ್ಕಿಳಿಸುವ ಸಾಧ್ಯತೆಯಿದೆ ಎಂದು ತಿಳಿದು ಬಂದಿದೆ.

## ಅಂಬಾರಿ ಬಸ್‌ಗಳಿಗೆ ಬಾಂಬ್ ಬೆದರಿಕೆ: ಸಾರಿಗೆ ಇಲಾಖೆ ಅಧಿಕಾರಿಗಳು ಅಲರ್ಟ್: ಬಸ್‌ಗಳಲ್ಲಿ ಕಟ್ಟೆಚ್ಚರ




ಬೆಂಗಳೂರು: ಅಂಬಾರಿ ಉತ್ಸವ ಬಸ್ಗಳಿಗೆ ಬಾಂಬ್ ಬೆದರಿಕೆ ಬಂದ ಬೆನ್ನಲ್ಲೇ ಇದೀಗ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾ–ರಿಗಳು ಅಲರ್ಟ್ ಆಗಿದ್ದಾರೆ. ಬಸ್ಗಳಲ್ಲಿ ಕಟ್ಟೆಚ್ಚರ ವಹಿಸುವಂತೆ ಮತ್ತು ಪ್ರಯಾಣಿಕರ ಮೇಲೆ ನಿಗಾ ಇಡುವಂತೆ ಚಾಲಕ ಹಾಗೂ ನಿರ್ವಾಹಕರಿಗೆ ಸೂಚಿಸಲಾಗಿದೆ. ಬರುವ ಪ್ರಯಾಣಿಕರ ಚಲವಲನದ ಮೇಲೆ ಕಣ್ಣಿಡಲು ಸೂಚನೆ ನೀಡಲಾಗಿದೆ.

ರಾಜ್ಯಾದ್ಯಂತ ಒಟ್ಟು 20 ಅಂಬಾರಿ ಉತ್ಸವ ಬಸ್ಗಳು ಕಾರ್ಯಾಚ–ರಿಸುತ್ತಿವೆ. ಈ ಪೈಕಿ, ಬೆಂಗಳೂರಿನಲ್ಲಿ 16 ಹಾಗೂ ಕುಂದಾಪುರ ಮತ್ತು ಮಂಗಳೂರಿನಲ್ಲಿ 4 ಬಸ್ಗಳಿವೆ. ಅಂಬಾರಿ ಉತ್ಸವ ಎಸಿ ಸ್ಲೀಪರ್ ಕೋಚ್ ಬಸ್ಗಳಾಗಿದ್ದು, ಹೈದರಾಬಾದ್, ಚೆನ್ನೈ ಹಾಗೂ ಎರ್ನಾಕುಲಂಗೆ ಸಹ ಸಂಚರಿಸುತ್ತವೆ. ಎಲ್ಲರ ಚಲನವಲನದ ಮೇಲೆ ಕಣ್ಣು ಇಡುತ್ತೇವೆ. ಅನುಮಾನ ಬಂದರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡುತ್ತೇವೆ ಎಂದು ಅಂಬಾರಿ ಸಿಬ್ಬಂದಿ ಪ್ರಯಾಣಿಕರಿಗೆ ಭರವಸೆ ನೀಡಿದ್ದಾರೆ.

ಬಸ್, ರೈಲು, ಬಸ್ ಸ್ಟಾಂಡ್ ಸೇರಿ ಹಲವಾರು ಕಡೆ ಬಾಂಬ್ ಸ್ಫೋಟ ಮಾಡುವುದಾಗಿ ಬೆದರಿಕೆಯ ಸಂದೇಶವುಳ್ಳ ಇ–ಮೇಲ್ ಮಂಗಳವಾರ ಬಂದಿತ್ತು. ಸಿಎಂ, ಡಿಸಿಎಂ, ಗೃಹ ಸಚಿವರು ಮತ್ತು ಬೆಂಗಳೂರು ನಗರ ಪೊಲೀಸ್ ಕಮಿಷನರ್ಗೆ ಬೆದರಿಕೆಯ ಸಂದೇಶವುಳ್ಳ ಇ–ಮೇಲ್ ಬಂದಿತ್ತು. ಬೆಂಗಳೂರಿನ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣದ ತನಿಖೆ ಪ್ರಗತಿಯಲ್ಲಿರುವ ಸಂದರ್ಭದಲ್ಲೇ ನಗರಕ್ಕೆ ಮತ್ತೊಂದು ಬಾಂಬ್ ಬೆದರಿಕೆ ಸಂದೇಶ ಬಂದಿದೆ. ಹೀಗಾಗಿ ಪೊಲೀಸರು ಕಟ್ಟೆಚ್ಚರ ವಹಿಸುತ್ತಿದ್ದಾರೆ.

## ಸಂಸದ ಹೆಗಡೆ ಮೇಲೆ ಕೇಸ್ ದಾಖಲು



ಕಾರವಾರ: ಭಟ್ಕಳದಲ್ಲಿಸಾವರ್ಕರ್ ನಾಮಫಲಕ ಮತ್ತು ಹನುಮಾನ್ ಧ್ವಜ ಹಾರಿಸಿದ ಹಿನ್ನೆಲೆ ಸಂಸದ ಅನಂತ್ಕುಮಾರ್ ಹೆಗಡೆ ಸೇರಿದಂತೆ ಒಟ್ಟು 21 ಜನರ ಮೇಲೆ ಭಟ್ಕಳ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಭಟ್ಕಳದ ತೆಂಗಿನಗುಂಡಿಯ ಬಂದರು ಆವರಣದಲ್ಲಿ ಸಾವರ್ಕರ್ ನಾಮಫಲಕ ಮತ್ತು ಹನುಮಾನ್ ಧ್ವಜವನ್ನು ಸಂಸದ ಅನಂತಕುಮಾರ್ ಹೆಗಡೆ ಮುಂದಾಳತ್ವದಲ್ಲಿ ಸೋಮವಾರ ಹಾರಿಸಲಾಗಿತ್ತು. ಪರವಾನಿಗೆ ಪಡೆಯಲಿಲ್ಲ ಎಂದು ಕಳೆದ ತಿಂಗಳಲ್ಲಿ ಭಗವಾಧ್ವಜ ಹಾಗೂ ನಾಮಫಲಕ ತೆರವುಗೊಳಿದ್ದ ಗ್ರಾಮಪಂಚಾಯತ್ ಅಧಿಕಾರಿಗಳು ಅನುಮತಿ ಪಡೆದು ಹಾಕುವಂತೆ ತಿಳಿಸಿದ್ದರು.

ಈ ವಿಷಯ ಸಾಕಷ್ಟು ಚರ್ಚೆಗೆ ಗ್ರಾಸವಾಗಿ ವಿವಾದಕ್ಕೆ ಕಾರಣವಾಗಿತ್ತು. ಆದರೆ ಕಳೆದ ಸೋಮವಾರ ಕಾರ್ಯಕರ್ತರ ಮೂಲಕ ಹನುಮಾನ್ ಧ್ವಜ ಹಾರಿಸಿ, ಸಾವರ್ಕರ್ ನಾಮಫಲಕ ಅಳವಡಿಸಿದ್ದ ಸಂಸದ ಅನಂತ್ಕುಮಾರ್ ಹೆಗಡೆ ಏನು ಮಾಡಿಕೊಳ್ಳುತ್ತೀರಿ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸವಾಲು ಹಾಕಿದ್ದರು.

## ಬನವಾಸಿ ಕದಂಬೋತ್ಸವಕ್ಕೆ ಸಿಎಂ ಸಿದ್ದರಾಮಯ್ಯ ಚಾಲನೆ



ಬನವಾಸಿ: ಕನ್ನಡದ ಮೊದಲ ರಾಜವಂಶ ಕದಂಬರ ರಾಜಧಾನಿ ಬನವಾಸಿಯಲ್ಲಿ ಐತಿಹಾಸಿಕ ಕದಂಬೋತ್ಸವ ಕಾರ್ಯಕ್ರಮಕ್ಕೆ ಅದ್ಧೂರಿಯಾಗಿ ಚಾಲನೆ ದೊರತಿ–ದೆ. ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾಡಳಿತದ ವತಿಯಿಂದ ಎರಡು ದಿನಗಳ ಕಾಲ ಆಯೋಜಿಸಲಾಗಿರುವ ಸಮಾರಂಭವನ್ನು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು.

ಸಿಎಂ ಆದ ಬಳಿಕ ಮೊದಲ ಬಾರಿಗೆ ಉತ್ತರಕನ್ನಡ ಜಿಲ್ಲೆಗೆ ಆಗಮಿಸಿದ ಸಿದ್ದರಾಮಯ್ಯಗೆ ಅದ್ಧೂರಿಯಾಗಿ ಸ್ವಾಗತಿಸಲಾಯಿತು. ಬಳಿಕ ಇತಿಹಾಸ ಪ್ರಸಿದ್ಧ ಮಧುಕೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಕಾರ್ಯಕ್ರಮ ಉದ್ಘಾಟನೆ ಬಳಿಕ ಮಾತನಾಡಿದ ಸಿಎಂ ಗ್ಯಾರಂಟಿ ಯೋಜನೆ ಬಗ್ಗೆ ಅಬ್ಬರಿಸಿ ಬಿಜೆಪಿ ವಿರುದ್ಧ ಕಿಡಿಕಾರಿದರು.

ಇನ್ನು, ಬಿಜೆಪಿ ಅಂತರ ಕಾಯ್ದುಕೊಂಡಿರುವ ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್ ತಮ್ಮ ತವರು ಕ್ಷೇತ್ರಕ್ಕೆ ಆಗಮಿಸಿದ ಸಿದ್ದರಾಮಯ್ಯ ಅವರನ್ನು ಸ್ವಾಗತಿಸಿ ಕೆಲಕಾಲ ಚರ್ಚೆ ಸಹ ಕೆಲಕಾಲ ನಡೆಸಿದರು. ಅಲ್ಲದೇ ವೇದಿಕೆಯಲ್ಲಿ ಮಾತನಾಡುವ ವೇಳೆಯೂ ಸಹ ಸಿಎಂ ಸಿದ್ದರಾಮಯ್ಯ ಅವರನ್ನು ಹಾಡಿ ಹೊಗಳಿದ್ದು, ಶಿವರಾಂ ಹೆಬ್ಬಾರ್ ಮತ್ತೆ ಘರ್ವಾಪ್ಸಿ ಆಗ್ತಾರಾ ಎಂಬ ಪ್ರಶ್ನೆ ಮೂಡಿದೆ. ಅದ್ದೂರಿಯಾಗಿ ಚಾಲನೆಗೊಂಡ ಕದಂಬೋತ್ಸವದಲ್ಲಿ ಸಂಗೀತ ಕಾರ್ಯಕ್ರಮಗಳು, ನೃತ್ಯಗಳು ಮೇಳೈಸಿದ್ದು, ಸಂಗೀತ ನಿರ್ದೇಶಕ ರಘು ದೀಕ್ಷಿತ್ ತಂಡದಿಂದ ಸಂಗೀತ ರಸ ಸಂಜೆ ಕಾರ್ಯಕ್ರಮವನ್ನು ಸಹ ಏರ್ಪಡಿಸಿದ್ದು, ಸಾವಿರಾರು ಜನರು ಆಗಮಿಸಿ ಕಾರ್ಯಕ್ರಮವನ್ನು ಕಣ್ತುಂಬಿಕೊಂಡರು.

ಒಟ್ಟಿನಲ್ಲಿ ಕನ್ನಡದ ಪ್ರಥಮ ರಾಜಧಾನಿ ಬನವಾಸಿಯಲ್ಲಿ ಮೊದಲ ದಿನದ ಕದಂಬೋತ್ಸವದಲ್ಲಿ ಅದ್ದೂರಿಯಾಗಿ ಕಾರ್ಯಕ್ರಮ ನೆರವೇರಿದ್ದು, ಎರಡನೇ ದಿನವಾದ ಇಂದು ಕೂಡ ಹಲವು ಸಾಂಸ್ಕೃತಿಕ ಕಲಾ ತಂಡಗಳಿಂದ ರಸಮಂಜರಿ ಕಾರ್ಯಕ್ರಮಗಳನ್ನ ಆಯೋಜಿಸಲಾಗಿದೆ. ಜನರು ಕೂಡ ಕಣ್ತುಂಬಿಕೊಳ್ಳಲು ಕಾತರರಾಗಿದ್ದಾರೆ.

## ನಿಜಲಿಂಗಪ್ಪ ಸಕ್ಕರೆ ಸಂಸ್ಥೆಗೆ ಭೇಟಿ ನೀಡಿದ ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ



ಬೆಳಗಾವಿ: ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಬೆಳಗಾವಿಯಲ್ಲಿಂದು ನಿಜಲಿಂಗಪ್ಪ ಸಕ್ಕರೆ ಸಂಸ್ಥೆಗೆ ಭೇಟಿ ನೀಡಿ ಪರಿಶೀಲಿಸಿದರು.

ಸಂಸ್ಥೆಯಲ್ಲಿ ಅಳವಡಿಸಲಾಗಿರುವ ನೂತನ ತಂತ್ರಜ್ಞಾನಗಳು , ಶೈಕ್ಷಣಿಕ ಸುಧಾರಣೆ ಕ್ರಮಗಳ ಬಗ್ಗೆ ಸಚಿವರು ಮಾಹತಿ ಪಡೆದರು.

ರೋಗ ರಹಿತ ಅಧಿಕ ಇಳುವರಿಯ ಕಬ್ಬು ಸಸಿ ಅಭಿವೃದ್ಧಿ ಕೇಂದ್ರಕ್ಕೂ ಭೇಟಿ ನೀಡಿ ಉಪನ್ಯಾಸಕರು ಮತ್ತು ವಿಜ್ಞಾನಿಗಳಿಂದ ಮಾಹಿತಿ ಪಡೆದರು.

## ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ವಿರುದ್ಧ ಹೊಸ ದೂರು ದಾಖಲಿಸಿದ ಇಡಿ

ನವದೆಹಲಿ: ರದ್ದಾಗಿರುವ ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಹಲವು ಬಾರಿ ಸಮನ್ಸ್ ನೀಡಿದರೂ ವಿಚಾರಣೆಗೆ ಹಾಜರಾಗದ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಜಾರಿ ನಿರ್ದೇಶನಾಲಯ(ಇಡಿ) ದೆಹಲಿ ನ್ಯಾಯಾಲಯಕ್ಕೆ ಹೊಸ ದೂರು ಸಲ್ಲಿಸಿದೆ ಎಂದು ಅಧಿಕೃತ ಮೂಲಗಳು ಬುಧವಾರ ತಿಳಿಸಿವೆ.

ಈ ಹೊಸ ದೂರಿನಲ್ಲಿ ಆಮ್ ಆದ್ಮಿ ಪಕ್ಷದ(ಎಎಪಿ) ರಾಷ್ಟ್ರೀಯ ಸಂಚಾಲಕರಾಗಿರುವ ಅರವಿಂದ್ ಕೇಜ್ರಿವಾಲ್ ಅವರು 4 ರಿಂದ 8 ರವರೆಗಿನ ಸಮನ್ಸ್‌ಗಳನ್ನು ಗೌರವಿಸಿಲ್ಲ ಎಂದು ಇಡಿ ಆರೋಪಿಸಿದೆ.

ಎಸಿಎಂಎಂ ದಿವ್ಯಾ ಮಲ್ಹೋತ್ರಾ ಅವರ ನ್ಯಾಯಾಲಯ, ಗುರುವಾರ ಈ ಹೊಸ ದೂರಿನ ವಿಚಾರಣೆ ನಡೆಸಲಿದೆ.

ದೆಹಲಿ ಅಬಕಾರಿ ನೀತಿಗೆ ಸಂಬಂಧಿಸಿದ ಮನಿ ಲಾಂಡರಿಂಗ್ ತನಿಖೆಯಲ್ಲಿ ಕೇಜ್ರಿವಾಲ್ ಅವ–ರಿಗೆ ನೀಡಲಾದ ಮೊದಲ ಮೂರು ಸಮನ್ಸ್‌ಗಳಿಗೆ ಹಾಜರಾಗದ ದೆಹಲಿ ಸಿಎಂ ವಿರುದ್ಧ ಪ್ರಾಸಿಕ್ಯೂಷನ್ ಕೋರಿ ಇಡಿ ಈ ಹಿಂದೆ ಸ್ಥಳೀಯ ನ್ಯಾಯಾಲಯದ ಮೊರೆ ಹೋಗಿತ್ತು. ನ್ಯಾಯಾಲಯ ಮಾರ್ಚ್ 16 ರಂದು ಈ ಪ್ರಕರಣದ ವಿಚಾರಣೆಗೆ ಪಟ್ಟಿ ಮಾಡಿದೆ.

## ಮದುವೆಯಾಗಿ ಮೋಸ ಮಾಡಿದ್ದಾನೆ, ಆತ್ಮಹತ್ಯೆ ಮಾಡಿಕೊಳ್ತಿನಿ: ನಟಿ ವಿಜಯಲಕ್ಷ್ಮಿ



ಬೆಂಗಳೂರು: ಸಿನಿಮಾ ಜೀವನಕ್ಕಿಂತಲೂ ಖಾಸಗಿ ಜೀವನದಿಂದಲೇ ಹೆಚ್ಚು ವಿವಾದಕ್ಕೊಳಗಾದ ನಟಿ ವಿಜಯಲಕ್ಷ್ಮಿ ಇದೀಗ ಮತ್ತೊಂದು ವಿಡಿಯೋ ಹ–ರಿಬಿಟ್ಟಿದ್ದಾರೆ.

ನಾಮ್ ತಮಿಳರ್ ಪಾರ್ಟಿಯ ಸೀಮಾನ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಈ ಹಿಂದೆ ನಟಿ ವಿಜಯಲಕ್ಷ್ಮಿ ಟೆರೇಸ್ ಮೇಲೆ ನಿಂತು ವಿಡಿಯೋ ಮಾತಿದ್ದರು. ಸೀಮಾನ್ ನನ್ನ ಬಳಿ ಮಾತನಾಡಲಿ ಎಂದು ವಿಡಿಯೋ ಮೂಲಕ ಜೀವನವನ್ನು ಜಗಜ್ಜಾಹೀರು ಮಾಡಿದ್ದರು.

ಅದಾದಮೇಲೂ ಸೀಮಾನ್ ಕಡೆಯಿಂದ ಯಾವುದೇ ಪ್ರತಿಕ್ರಿಯೆ ಬಾರದ ಕಾರಣ ನಟಿ ಇನ್ನೊಂದು ವಿಡಿಯೋ ಮಾಡಿ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಹೇಳಿದ್ದಾರೆ.

ಬೆಳಗಾವಿ ವರದಿ

THURSDAY, 07 MARCH 2024

# ರಾಜ್ಯಮಟ್ಟದ ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆಯಲ್ಲಿ ಬೆಳಗಾವಿ ಬಿ.ವಿ.ಬೆಲ್ಲದ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿ ತಿರುಮಲ ಭಟ್ಕಳ ಅವರಿಗೆ ಪ್ರಥಮ ಸ್ಥಾನ

ಬೆಳಗಾವಿ: ಕರ್ನಾಟಕ ಕಾನೂನು ಮತ್ತು ಸಂಸಧೀಯ ಸುಧಾರಣಾ ಸಂಸ್ಥೆ, ಬೆಂಗಳೂರು ಆಯೋಜಿಸಿದ್ದ ರಾಜ್ಯ ಮಟ್ಟದ ಕಾನೂನು ವಿದ್ಯಾರ್ಥಿಗಳ ಮಾದರಿ ವಿಧಾನ ಸಭಾ ಅಧಿವೇಶನ ಸ್ಪರ್ಧೆ 2023–24 ರಲ್ಲಿ ಬೆಳಗಾವಿಯ ಕೆಎಲ್ ಇ ಸಂಸ್ಥೆಯ ಬಿ.ವಿ.ಬೆಲ್ಲದ ಕಾನೂನು ಕಾಲೇಜಿನ ವಿದ್ಯಾರ್ಥಿ ತಿರುಮಲ ನಾಯ್ಕ ಪ್ರಥಮ ಸ್ಥಾನ ಪಡೆದು ಬೀಗಿದ್ದಾರೆ.

ವಿಕಾಸ ಸೌಧ ಬೆಂಗಳೂರು ಕೊಠಡಿ ಸಂಖ್ಯೆ 419 ರಲ್ಲಿ ನಡೆದ ಕಾನೂನು ವಿದ್ಯಾರ್ಥಿಗಳ ರಾಜ್ಯ ಮಟ್ಟದ ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆಯಲ್ಲಿ ಬೆಳಗಾವಿಯ ಕೆ ಎಲ್ ಇ ಸಂಸ್ಥೆಯ ಬಿ.ವಿ. ಬೆಲ್ಲದ ಲಾ ಕಾಲೇಜಿನ ವಿದ್ಯಾರ್ಥಿ ತಿರುಮಲ ನಾಯ್ಕ ಮೊದಲ ಸ್ಥಾನ ಪಡೆದು ಕೆಎಲ್ ಇ ಸಂಸ್ಥೆ ಮತ್ತು ಬಿ.ವಿ. ಬೆಲ್ಲದ ಕಾನೂನು ಮಹಾವಿದ್ಯಾಲಯಕ್ಕೆ ಹೆಮ್ಮೆ ತಂದಿದ್ದಾರೆಂದು ಕಾಲೇಜಿನ ಪ್ರಾಂಶುಪಾಲ ಬಿ. ಜಯಸಿಂಹ ತಿಳಿಸಿದರು.



ರಾಜ್ಯದ ಐದು ವಲಯಗಳಲ್ಲಿ ನಡೆದ ವಲಯ ಮಟ್ಟದ ಸ್ಪರ್ಧೆಗಳಲ್ಲಿ ಆಯ್ಕೆಯಾದ ಒಟ್ಟು 50 ಜನ ಕಾನೂನು ವಿದ್ಯಾರ್ಥಿಗಳಿಗೆ ರಾಜ್ಯಮಟ್ಟದ ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆಯನ್ನು ದಿನಾಂಕ 05/04/2024 ರಂದು ವಿಕಾಸ ಸೌಧದಲ್ಲಿ ಆಯೋಜಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಬೆಳಗಾವಿಯ ವಿದ್ಯಾರ್ಥಿ ತಿರುಮಲ ನಾಯ್ಕ "ವಿಧಾನಸಭಾ ಸಭಾಧ್ಯಕ್ಷ" ರಾಗಿ ಆಯ್ಕೆಯಾಗಿ ಪೂರ್ತಿ ಅಧಿವೇಶನವನ್ನು ಅಚ್ಚುಕಟ್ಟಾಗಿ ನಿಭಾಯಿಸಿ ಪ್ರಶಂಸೆಗೆ ಪಾತ್ರರಾದರು.

ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ವಿದ್ಯಾರ್ಥಿಗಳನ್ನ ಉದ್ದೇಶಿಸಿ ಮಾತನಾಡಿದ ಕೆಳಮನೆಯ ಸಭಾಧ್ಯಕ್ಷ ಯು.ಟಿ.ಖಾದರ್ ಅವರು, ಕಾನೂನು ವಿದ್ಯಾರ್ಥಿಗಳು ರಾಜಕೀಯಕ್ಕೆ ಬರಬೇಕೆಂಬ ಆಶಯ ವ್ಯಕ್ತ ಪಡಿಸಿದರು.

ನಂತರ ಮಾತನಾಡಿದ ಮೇಲ್ಮನೆಯ ಸಭಾಪತಿ ಬಸವರಾಜ ಹೊರಟ್ಟಿಯವರು, ವಿದ್ಯಾರ್ಥಿಗಳು ದೇಶದ ಪ್ರಜಾಪ್ರಭುತ್ವದ ಆಸ್ತಿ ಎಂದು ಹೇಳಿದರು.

ಸ್ಪರ್ಧೆಯ ವಿಜೇತರಿಗೆ ಯು.ಟಿ. ಖಾದರ್ ಮತ್ತು ಬಸವರಾಜ ಹೊರಟ್ಟಿಯವರು ಬಹುಮಾನ ವಿತ–ರಿಸಿದರು.

ಬೆಳಗಾವಿ ಬಿ.ವಿ. ಬೆಲ್ಲದ ಲಾ ಕಾಲೇಜಿನ ವಿದ್ಯಾರ್ಥಿ ತಿರುಮಲ ಭಟ್ಕಳ ಮೊದಲ ಸ್ಥಾನ ಪಡೆದು ಪಾರಿತೋಷಕ ಜೊತೆಗೆ 10,000/– ರೂಪಾಯಿಗಳ ನಗದು ಬಹುಮಾನ ಪಡೆದುಕೊಂಡರು.

ಕಾರ್ಯಕ್ರಮದ ಸಂಯೋಜಕರಾದ ಕರ್ನಾಟಕ ಸಂಸದೀಯ ಸುಧಾರಣಾ ಸಂಸ್ಥೆಯ ನಿರ್ದೇಶಕ ಡಾ.ಕೆ.ದ್ವಾರಕನಾಥ ಬಾಬು ಮತ್ತು ಅವರ ಎಲ್ಲಾ ಸಿಬ್ಬಂದಿ ವರ್ಗ ಗೆದ್ದ ಎಲ್ಲಾ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಬಿ.ವಿ.ಬೆಲ್ಲದ ಕಾನೂನು ಕಾಲೇಜಿನ ಪ್ರಾಂಶುಪಾಲರು, ಭೋಧಕ ಮತ್ತು ಭೋಧಕೇತರ ಸಿಬ್ಬಂದಿ ಹಾಗೂ ಎಲ್ಲಾ ವಿದ್ಯಾರ್ಥಿಗಳು ತಮ್ಮ ಕಾಲೇಜಿನ ವಿದ್ಯಾರ್ಥಿ ತಿರುಮಲ ನಾಯ್ಕ ಇವರ ಸಾಧನೆಗೆ ಅಭಿಮಾನ ವ್ಯಕ್ತಪಡಿಸಿದರು.

ಭಟ್ಕಳದ ತೆಂಗಿನ ಗುಂಡಿಯ ನಿವಾಸಿಯಾಗಿರುವ ತಿರುಮಲ ನಾಯ್ಕ ತಮ್ಮ ವಾಕ್ಚಾತುರ್ಯ ಮತ್ತು ಬರವಣಿಗೆಯ ಮುಖಾಂತರ ತಿರುಮಲ ಭಟ್ಕಳ ಎಂದೇ ಖ್ಯಾತರು. ತಮ್ಮ ಡಿಪ್ಲೋಮಾ ಇನ್ ಮೆಕ್ಯಾನಿಕಲ್ ಇಂಜಿನಿಯರಿಂಗ್ ಅನ್ನು ಆರ್ ಎನ್ ಶೆಟ್ಟಿ ರೂರಲ್ ಪಾಲಿಟೆಕ್ನಿಕ್ ಮುರ್ಡೇಶ್ವರದಲ್ಲಿ ಮುಗಿಸಿ ಬೆಳಗಾವಿಯಲ್ಲಿ ಖಾಸಗಿ ಕಂಪನಿ ಉದ್ಯೋಗಿಯಾಗಿರುವ ಇವರು ಕಾನೂನನ್ನು ಅಭ್ಯಾಸಿಸುವ ಆಸಕ್ತಿಯಿಂದ ಬೆಳಗಾವಿಯ ಕೆ. ಎಲ್.ಇ ಸಂಸ್ಥೆಯ ಬಿ.ವಿ. ಬೆಲ್ಲದ ಕಾನೂನು ಕಾಲೇಜಿನಲ್ಲಿ ಕಾನೂನು ವಿಧ್ಯಾಭ್ಯಾಸವನ್ನು ಮುಂದುವರೆಸಿದ್ದಾರೆ. ಈಗಾಗಲೇ ಅನೇಕ ಸ್ಪರ್ಧೆಗಳಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿ ಸಂಸ್ಥೆಗೆ ಕೀರ್ತಿ ತಂದಿದ್ದಾರೆ. ಈ ಬಾರಿಯೂ ರಾಜ್ಯಮಟ್ಟದ ಮಾದರಿ ವಿಧಾನಸಭಾ ಅಧಿವೇಶನವನ್ನು ಸಭಾಧ್ಯಕ್ಷರಾಗಿ ಅಚ್ಚುಕಟ್ಟಾಗಿ ನಿರ್ವಹಿಸಿ ಸ್ಪರ್ಧೆಯಲ್ಲಿ ಮೊದಲ ಸ್ಥಾನ ಪಡೆದಿರುತ್ತಾರೆ.

## ಟಿಎಂಸಿ ಮಾಜಿ ನಾಯಕ ತಪಸ್ ರಾಯ್ ಬಿಜೆಪಿ ಸೇರ್ಪಡೆ



ಕೋಲ್ಕತ್ತಾ: ಇತ್ತೀಚೆಗಷ್ಟೇ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ತೃಣಮೂಲ ಕಾಂಗ್ರೆಸ್(ಟಿಎಂಸಿ) ಮಾಜಿ ನಾಯಕ ತಪಸ್ ರಾಯ್ ಅವರು ಬುಧವಾರ ಭಾರತೀಯ ಜನತಾ ಪಕ್ಷ(ಬಿಜೆಪಿ)ಕ್ಕೆ ಸೇರಿದ್ದಾರೆ.

ಟಿಎಂಸಿಯ ಹಿರಿಯ ನಾಯಕ ತಪಸ್ ರಾಯ್ ಅವರು ಕಳೆದ ಸೋಮವಾರ ಪಕ್ಷದ ಕಾರ್ಯವೈಖರಿ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ ಶಾಸಕ ಸ್ಥಾನಕ್ಕೆ ಮತ್ತು ಪಕ್ಷಕ್ಕೆ ರಾಜೀನಾಮೆ ನೀಡಿದ್ದರು.

ಇಂದು ಕೋಲ್ಕತ್ತಾದಲ್ಲಿ ಬಿಜೆಪಿ ನಾಯಕ ಸುವೇಂದು ಅಧಿಕಾರಿ ಸಮ್ಮುಖದಲ್ಲಿ ತಪಸ್ ರಾಯ್ ಅವರು ಕೇಸರಿ ಪಕ್ಷ ಸೇರಿದರು.

ಟಿಎಂಸಿಗೆ ರಾಜೀನಾಮೆ ನೀಡುವ ಮುನ್ನ ರಾಯ್ ಅವರು, ಪಶ್ಚಿಮ ಬಂಗಾಳ ಸರ್ಕಾರ ಸಂದೇಶಖಾಲಿ ಪ್ರಕರಣವನ್ನು ನಿರ್ವಹಿಸಿದ ರೀತಿಯ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರು.

## ಅರ್ಜಿ ಆಹ್ವಾನ

ಧಾರವಾಡ: ಪ್ರಸ್ತುತ ಸಾಲಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ನೀಡಿ, 8ನೇ ತರಗತಿಗೆ ಪ್ರವೇಶ ಪಡೆಯಲು ಪ್ರತಿಭಾವಂತ ಗಂಡು ಮಕ್ಕಳಿಂದ ಮೈಸೂರು ಯಾದವಗಿರಿಯ ಶ್ರೀ ರಾಮಕೃಷ್ಣ ವಿದ್ಯಾ ಶಾಲೆವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಚಿಸುವ ವಿದ್ಯಾರ್ಥಿಗಳು ಧಾರವಾಡ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರ ಕಾರ್ಯಾಲಯ ಹಾಗೂ ಹುಬ್ಬಳ್ಳಿ, ಕಲಘಟಗಿ, ಕುಂದಗೋಳ ಹಾಗೂ ನವಲಗುಂದ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಕಾರ್ಯಾಲಯದಿಂದ ಅರ್ಜಿ ಪಡೆದು ಮಾರ್ಚ್ 29 ರೊಳಗಾಗಿ ಭರ್ತಿ ಮಾಡಿ ಸಲ್ಲಿಸಬೇಕು. ಮೈಸೂರು ಯಾದವಗಿರಿಯ ಶ್ರೀ ರಾಮಕೃಷ್ಣ ವಿದ್ಯಾ ಶಾಲೆಯಲ್ಲಿ ಏಪ್ರಿಲ್ 11, 2024 ರಂದು ಬೆಳಗ್ಗೆ 10 ಗಂಟೆಗೆ ಪ್ರವೇಶ ಪರೀಕ್ಷೆ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 0836–2447201, 0836–2435475 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ವಿಎಸ್‌ಕೆ ವಿಶ್ವವಿದ್ಯಾಲಯ: ಉಪಕುಲಪತಿಯಾಗಿ ಪ್ರೊ.ಕೆ.ಎಂ.ಮೇತ್ರಿ ನೇಮಕ

ಬಳ್ಳಾರಿ: ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಉಪಕುಲಪತಿಯಾಗಿ ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಬುಡಕಟ್ಟು ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ಕೆ.ಎಂ.ಮೇತ್ರಿ ಅವರನ್ನು ನೇಮಕ ಮಾಡಿ ರಾಜ್ಯಪಾಲರ ಸಚಿವಾಲಯವು ಮಾರ್ಚ್ 05ರಂದು ಆದೇಶ ಹೊರಡಿಸಿತ್ತು. ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಉಪಕುಲಪತಿಯಾಗಿ ಪ್ರೊ.ಕೆ.ಎಂ. ಮೇತ್ರಿ ಬುಧವಾರ ಅಧಿಕಾರ ವಹಿಸಿಕೊಂಡರು.

ಪ್ರಭಾರ ಕುಲಪತಿಯಾಗಿದ್ದ ಪ್ರೊ.ವಿಜಯಕುಮಾರ್ ಬಿ.ಮಲಶೆಟ್ಟಿ ನೂತನ ಕುಲಪತಿಗಳಿಗೆ ಅಧಿಕಾರವನ್ನು ಹಸ್ತಾಂತರಿಸಿದರು.

ಪ್ರೊ.ಕೆ.ಎಂ.ಮೇತ್ರಿ ಅವರು ಮೂಲತಃ ಬೀದರ್ ಜಿಲ್ಲೆಯವರು. 33 ವರ್ಷಗಳ ಸುದೀರ್ಘ ಶೈಕ್ಷಣಿಕ ಅನುಭವ ಹೊಂದಿದ್ದಾರೆ. ಈ ಮೊದಲು ಹಂಪಿ ಕನ್ನಡ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಯಾಗಿ ಕಾರ್ಯನಿರ್ವಹಿಸಿದ್ದಾರೆ.

## ಆರೇ ತಿಂಗಳಿಗೆ ಜನಿಸಿದ ಅವಳಿ ಮಕ್ಕಳು; ಆರೋಗ್ಯ ಸ್ಥಿರ



ಚಿಕ್ಕೋಡಿ (ಬೆಳಗಾವಿ ಜಿಲ್ಲೆ): ಚಿಕ್ಕೋಡಿ ತಾಲ್ಲೂಕಿನ ಯಕ್ಸಂಬಾದ ಮಹಿಳೆ ಆರೇ ತಿಂಗಳಿಗೆ ಅವಳಿ ಹೆಣ್ಣುಮಕ್ಕಳಿಗೆ ಜನ್ಮ ನೀಡಿದ್ದಾರೆ. ಎರಡೂವರೆ ತಿಂಗಳು ಶಿಶುಗಳಿಗೆ ವೈದ್ಯರು ಚಿಕಿತ್ಸೆ ನೀಡಿ, ಬದುಕಿಸಿದ್ದಾರೆ.

ಬ್ಯಾಂಕ್ ಕ್ಲರ್ಕ್ ಸಿದ್ದಪ್ಪ ಸಾತ್ವಾರ ಅವರ ಪತ್ನಿ ಅನಿತಾ ಈ ಅವಳಿ ಮಕ್ಕಳನ್ನು ಹೆತ್ತವರು. 2023ರ ಡಿಸೆಂಬರ್ 26ರಂದು ಅವರು ಸಹಜ ಹೆ–ರಿಗೆ ಮೂಲಕ ಅವಳಿ ಮಕ್ಕಳಿಗೆ ಜನ್ಮ ನೀಡಿದರು. ಚಿಕ್ಕೋಡಿಯ ದಿಯಾ ಆಸ್ಪತ್ರೆಯ ಪ್ರಸೂತಿ ತಜ್ಞೆ ಡಾ.ಸಂಧ್ಯಾ ಪಾಟೀಲ ಹೆರಿಗೆ ಮಾಡಿಸಿದ್ದಾರೆ.

ಹುಟ್ಟಿದಾಗ ಮೊದಲನೇ ಶಿಶು 830 ಗ್ರಾಂ, ಎರಡನೇ ಶಿಶು 890 ಗ್ರಾಂ ತೂಕ ಇದ್ದವು. ತೂಕ ಅತ್ಯಂತ ಕಡಿಮೆ ಇದ್ದ ಕಾರಣ ಚಿಕ್ಕೋಡಿಯ ದಿವ್ಯಂ ಮಕ್ಕಳ ಆಸ್ಪತ್ರೆಗೆ ದಾಖಲಿಸಲಾಯಿತು. ಮಕ್ಕಳತಜ್ಞ ಡಾ.ಅಮಿತ್ ಮಗದುಮ್ ಸೂಕ್ತ ಚಿಕಿತ್ಸೆ ನೀಡಿ ಎರಡೂ ಶಿಶುಗಳು ಆರೋಗ್ಯವಾಗಿ ಬರುವಂತೆ ಮಾಡಿದರು.

'ಸದ್ಯ ಮೊದಲ ಶಿಶು 1,600 ಗ್ರಾಂ ಹಾಗೂ ಎರಡನೇ ಶಿಶು 1,580 ಗ್ರಾಂ ತೂಕ ಹೊಂದಿದ್ದು, ಆರೋಗ್ಯದಲ್ಲಿ ಸ್ಥಿರತೆ ಇದೆ. ಒಂದು ವಾರದಲ್ಲಿ ಶಿಶುಗಳನ್ನು ಮನೆಗೆ ಕಳುಹಿಸಲಾಗುವುದು' ಎಂದು ಡಾ.ಅಮಿತ್ ತಿಳಿಸಿದರು.

'ಬೆಂಗಳೂರಿನಂಥ ನಗರಗಳಲ್ಲಿ ಇಂಥ ಹೆರಿಗೆಗಳು ಸಫಲವಾದ ಉದಾಹರಣೆ ಇವೆ. ಚಿಕ್ಕೋಡಿಯಲ್ಲಿ ವಿರಳಾತಿವಿರಳ. ಕೇವಲ ರೂ 3 ಲಕ್ಷದಲ್ಲಿ ಎರಡೂ ಶಿಶುಗಳ ಆರೋಗ್ಯ ಕಾಪಾಡಿದ್ದೇವೆ' ಎಂದರು.

**ಆರೇ ತಿಂಗಳಲ್ಲಿ ಜನಿಸಲು ಕಾರಣ**


'ತಾಯಿಯ ಗರ್ಭಕೋಶದಲ್ಲಿ ನೀರು ತುಂಬಿದ್ದರೆ, ರಕ್ತದೊತ್ತಡ ಹೆಚ್ಚಾಗಿದ್ದರೆ, ರಕ್ತದಲ್ಲಿ ಕೊಬ್ಬಿನಂಶ ಹೆಚ್ಚಿದ್ದರೆ, ಗರ್ಭಾಶಯ ಚೀಲದ ಬಾಯಿ ದೊಡ್ಡದಿದ್ದರೂ ಈ ರೀತಿ ಪ್ರಸವಪೂರ್ವ ಹೆರಿಗೆ ಆಗುತ್ತದೆ' ಎಂದು ಡಾ.ಸಂಧ್ಯಾ ತಿಳಿಸಿದರು.

'ಇನ್ಕ್ಯುಬಿಲೇಟರ್, ವೆಂಟಿಲೇಟರ್ ವ್ಯವಸ್ಥೆ ಮತ್ತು ನುರಿತ ನರ್ಸಿಂಗ್ ಸಿಬ್ಬಂದಿ ಇದ್ದರೆ ಮಾತ್ರ ಇಂಥ ಶಿಶುಗಳನ್ನು ಬದುಕಿಸಲು ಸಾಧ್ಯ. ಶಿಶುಗಳ ಕರುಳ ಬಳ್ಳಿಯನ್ನು 2 ಇಂಚು ಬಿಟ್ಟು ಇದರ ಮೂಲಕ ಶಿಶುಗಳಲ್ಲಿ ಕೊರತೆ ಇರುವ ಅಂಶವನ್ನು ಪೂರೈಸಲಾಗುತ್ತದೆ' ಎಂದರು.

'ಗರ್ಭದಲ್ಲಿ ಅವಳಿ ಭ್ರೂಣಗಳು ಇದ್ದ ಕಾರಣ 14 ವಾರಗಳಲ್ಲಿ ಗರ್ಭಾಶಯಕ್ಕೆ ಹೊಲಿಗೆ ಹಾಕಲಾಯಿತು. ಹೊಲಿಗೆ ಹಾಕದಿದ್ದರೆ ಭ್ರೂಣಗಳು ಜಾರಿ ಹೊರಬಿದ್ದು ಗರ್ಭಪಾತವಾಗುವ ಸಾಧ್ಯತೆ ಹೆಚ್ಚಿರುತ್ತದೆ. ಪೂರ್ವಯೋಜನೆಯಂತೆ 26ನೇ ವಾರದಲ್ಲಿ ಹೆರಿಗೆ ಮಾಡಿಸಲಾಗಿದೆ' ಎಂದು ಅವರು ವಿವರಿಸಿದರು.

## ಉಜ್ಜಯಿನಿ ಕ್ಷೇತ್ರಕ್ಕೆ ನೂತನ ಬಸ್ ಸೇವೆ

### ಮಾಹಾಶಿವರಾತ್ರಿ ದಿನದಿಂದ ಪ್ರತಿದಿನ ಧಾರವಾಡದಿಂದ ಉಜ್ಜಯಿನಿ ಶ್ರೀ ಪೀಠಕ್ಕೆ ಬಸ್ ಸೇವೆ ಆರಂಭ; ಭಕ್ತರು ಸದುಪಯೋಗಪಡಿಸಿಕೊಳ್ಳಲಿ: ಶಶಿಧರ ಚನ್ನಪ್ಪಗೌಡರ



ಧಾರವಾಡ: ಸಂಘ, ಸಂಸ್ಥೆಗಳ, ಭಕ್ತರ ಬಹುದಿನಗಳ ಬೇಡಿಕೆಗೆ ಅನುಸಾರವಾಗಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಧಾರವಾಡ ವಿಭಾಗದಿಂದ ಬರುವ ಶುಕ್ರವಾರ ಮಹಾಶಿವರಾತ್ರಿ ದಿನದಿಂದ ಪ್ರತಿದಿನ ವಿಜಯನಗರ ಜಿಲ್ಲೆಯ ಪಂಚಪೀಠದ ಉಜ್ಜಯಿನಿ ಶ್ರೀ ಕ್ಷೇತ್ರಕ್ಕೆ ಸರಕಾರಿ ಬಸ್ ಸೇವೆ ಪ್ರಾರಂಭಿಸಲಾಗುತ್ತಿದೆ ಎಂದು ಧಾರವಾಡ ವಿಭಾಗೀಯ ನಿಯಂತ್ರಣಾಧಿಕಾರಿ ಶಶಿಧರ ಚನ್ನಪ್ಪಗೌಡರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಉಜ್ಜಯಿನಿ ಉತ್ತರ ಕರ್ನಾಟಕದ ಪ್ರಮುಖ ಧಾರ್ಮಿಕ ಸ್ಥಳವಾಗಿದ್ದು, ಪಂಚಪೀಠದ ನೆಲೆಯಾಗಿದೆ. ಧಾರವಾಡದಿಂದ ಬಸ್ ಸೇವೆ ಪ್ರಾರಂಭಿಸಬೇಕೆಂಬುದು ಜನರ ಬಹುದಿನಗಳ ಬೇಡಿಕೆ ಆಗಿತ್ತು. ಧಾರವಾಡ ವೀರಶೈವ ಜಂಗಮ ಸಂಸ್ಥೆಯು ಮನವಿ ಸಲ್ಲಿಸಿ, ಶ್ರೀ ಕ್ಷೇತ್ರಕ್ಕೆ ಶೀಘ್ರ ಬಸ್ ಸೇವೆ ಪ್ರಾರಂಭಿಸಲು ವಿನಂತಿಸಿತ್ತು. ಅದರಂತೆ ಪರಿಶೀಲಿಸಿ, ಕ್ರಮ ಕೈಗೊಂಡಿದ್ದು, ಧಾರವಾಡದಿಂದ ಉಜ್ಜಯಿನಿಗೆ ಬಸ್ ಸೇವೆ ಪ್ರಾರಂಭಿಸಲಾಗುತ್ತಿದೆ.

ಮಾರ್ಚ್ 8 ರಿಂದ ಧಾರವಾಡ ಹೊಸ ಬಸ್ ನಿಲ್ದಾಣದಿಂದ ಉಜ್ಜಯಿನಿಗೆ ಬಸ್ ಸಂಚಾರ ಆರಂಭವಾಗಲಿದೆ. ಪ್ರತಿದಿನ ಬೆಳಿಗ್ಗೆ 7:15 ಗಂಟೆಗೆ ಧಾರವಾಡದಿಂದ ಹೊರಟು ಮಧ್ಯಾಹ್ನ 12:30 ಗಂಟೆಗೆ ಉಜ್ಜಯಿನಿ ತಲುಪಲಿದೆ. ಭಕ್ತರಿಗೆ ದೇವರ ಪೂಜೆ, ದರ್ಶನ ಮತ್ತು ಪ್ರಸಾದಕ್ಕೆ ಅನುಕೂಲವಾಗುವಂತೆ ಬಸ್ ನಿಲುಗಡೆ ಆಗಲಿದೆ.

ನಂತರ ಮಧ್ಯಾಹ್ನ 2 ಗಂಟೆಗೆ ಉಜ್ಜಯಿನಿಯಿಂದ ಹೊರಟು ಸಂಜೆ 6:30 ಗಂಟೆಗೆ ಮರಳಿ ಬಸ್ ಧಾರವಾಡ ತಲುಪಲಿದೆ. ಪ್ರತಿದಿನ ಬೆಳಿಗ್ಗೆ ಧಾರವಾಡದಿಂದ ಹೊರಟು ಹುಬ್ಬಳ್ಳಿ, ಗದಗ, ಮುಂಡರಗಿ, ಹಡಗಲಿ ಮಾರ್ಗವಾಗಿ ಉಜ್ಜಯಿನಿ ತಲುಪುತ್ತದೆ. ಮರಳಿ ಇದೇ ಮಾರ್ಗದಲ್ಲಿ ಬಂದು ಧಾರವಾಡ ತಲುಪುತ್ತದೆ. ಈ ಭಾಗದ ಭಕ್ತರು, ಸಾರ್ವಜನಿಕ ಪ್ರಯಾಣಿಕರು ಈ ಬಸ್ ಸೇವೆಯನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಧಾರವಾಡ ವಿಭಾಗೀಯ ನಿಯಂತ್ರಣಾಧಿಕಾರಿ ಶಶಿಧರ ಚನ್ನಪ್ಪಗೌಡರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2 ದಿನಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪಟ್ಟಿ ಬಿಡುಗಡೆ: ಸಿಎಂ ಸಿದ್ದರಾಮಯ್ಯ



ಕಾರವಾರ: ಮುಂದಿನ ಎರಡು ದಿನಗಳಲ್ಲಿ ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿ ಬಿಡುಗಡೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಭರದ ಸಿದ್ಧತೆ ಆರಂಭಿಸಿದೆ. ಎರಡು ದಿನದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿ ಬಿಡುಗಡೆಯಾಗಲಿದೆ. ಈ ಬಾರಿ ಅಭ್ಯರ್ಥಿಗಳ ಆಯ್ಕೆ ಅಷ್ಟೊಂದು ಸಮಸ್ಯೆ ಆಗಿಲ್ಲ. ಆದಷ್ಟು ಬೇಗ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡುತ್ತೇವೆ ಎಂದು ಹೇಳಿದರು. ಮಾ. 7ರಂದು ಕಾಂಗ್ರೆಸ್ ಸಿಇಸಿ ಸಭೆ ನಡೆಯಲಿದ್ದು, ಆ ಬಳಿಕ ಅಭ್ಯರ್ಥಿಗಳ ಪಟ್ಟಿಯ ಮಾಹಿತಿ ದೊರೆಯಲಿದೆ ಎಂದು ಡಿಸಿಎಂ ಸಹ ಈಗಾಗಲೇ ತಿಳಿಸಿದ್ದಾರೆ. ಈ ಮಧ್ಯೆ, ಸಿಎಂ ಕೂಡ ಹೇಳಿಕೆ ನೀಡಿರುವುದರಿಂದ ಕೆಲವೇ ದಿನಗಳಲ್ಲಿ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಬಹುತೇಕ ಖಚಿತವಾಗಿದೆ.

## ರೈತರ ಬಹುದಿನಗಳ ಕನಸು ಇಂದು ನನಸು: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ರೈತರ ಬಹುದಿನಗಳ ಕನಸಾಗಿದ್ದ ಕೊಟ್ಟಲಗಿ ಅಮ್ಮಾಜೇಶ್ವರಿ ಏತ ನೀರಾವರಿ ಯೋಜನೆ ಇಂದು ಕೊನೆಗೂ ನನಸಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಜಿಲ್ಲೆ ಅಥಣಿ ತಾಲ್ಲೂಕಿನ ಕೊಟ್ಟಲಗಿಯ ಅಮ್ಮಾಜೇಶ್ವರಿ ಏತ ನೀರಾವರಿ ಯೋಜನೆ ಶಂಕುಸ್ಥಾಪನಾ ಸಮಾರಂಭಲ್ಲಿ ಅವರು ಮಾತನಾಡಿ, ತಾಳ್ಮೆ ಹಾಗೂ ಛಲ ಇದ್ದರೆ ಎಂತಹ ಕೆಲಸ ಸಹ ಸಾಧ್ಯವಾಗಲಿದೆ ಎಂಬುದಕ್ಕೆ ಕೊಟ್ಟಲಗಿ ಅಮ್ಮಾಜೇಶ್ವರಿ ಏತ ನೀರಾವರಿ ಯೋಜನೆ ಅನುಷ್ಠಾನಗೊಂಡಿರುವುದು ನಿದರ್ಶನವಾಗಿದೆ. ಮುಖ್ಯವಾಗಿ ಸ್ಥಳಿಯ ಶಾಸಕ ಲಕ್ಷ್ಮಣ ಸವದಿ



ಅವರ ಪರಿಶ್ರಮದಿಂದ ಇಂದಿನ ಕೆಲಸ ನೆರವೇರಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಅಥಣಿ ತಾಲೂಕು ಬರಪೀಡಿತ ಪ್ರದೇಶವಾಗಿತ್ತು, ಕಳೆದ 10 ವರ್ಷಗಳಲ್ಲಿ ಸಾಕಷ್ಟು ನೀರಾವರಿ ಯೋಜನೆಗಳಿಂದ ಅಥ–ಣಿ ತಾಲೂಕು ಹಂತ–ಹಂತವಾಗಿ ಅಭಿವೃದ್ಧಿ ಹೊಂದುತ್ತಿದೆ. ಈ ಯೋಜನೆಗಳಿಂದ ಈ ಭಾಗದ ಅನ್ನದಾತರು ಅಭಿವೃದ್ಧಿಹೊಂದಲು ಸಹಕಾರಿಯಾಗಿದೆ. ಕೃಷಿ ಉತ್ಪಗಳಿಂದ ರೈತರು ಆರ್ಥಿಕವಾಗಿ ಬದಲಾವಣೆಯಾಗಿದ್ದಾರೆ. ಬಹಳಷ್ಟು ನೀರಾವರಿ ಯೋಜನೆಗಳಿಂದ ರೈತರಿಗೆ ಇದೊಂದು ಸಂಜೀವಿನಿಯಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಅಥಣಿ ತಾಲೂಕಿಗೆ ಕರಿ ಮಸೂತಿ ಸೇರಿದಂತೆ ಪ್ರಮುಖ ನೀರಾವರಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ರೈತರ ಹಿತಾಸಕ್ತಿ ಅನುಗುಣವಾಗಿ ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳು ಸೇರಿದಂತೆ ಅನೇಕ ಅಭಿವೃದ್ಧಿ ಯೋಜನೆಗಳನ್ನು ಚಾಲನೆ ನೀಡುವ ಮೂಲಕ ನಮ್ಮ ಸರ್ಕಾರ ಜನರ ಪರವಾಗಿ ಕಾರ್ಯ ನಿರ್ವಹಿಸುತ್ತದೆ ಎಂದು ಹೇಳಿದರು.

ಶಾಸಕ ಲಕ್ಷ್ಮಣ್ ಎಂ ಸವದಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಹಾಗೂ ಬೃಹತ್ ನೀರಾವರಿ ಸಚಿವರಾದ ಡಿ.ಕೆ.ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಕೈಗಾರಿಕಾ ಸಚಿವರಾದ ಎಂ.ಬಿ.ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಬ ಹಟ್ಟಿಹೊಳಿ, ಮಾಜಿ ಶಾಸಕಿ ಅಂಜಲಿ ನಿಂಬಾಳ್ಕರ್, ಶಾಸಕರಾದ ಮಹೇಂದ್ರ ತಮ್ಮಣ್ಣವರ, ಅಶೋಕ ಎಂ ಪಟ್ಟಣ ಸೇರಿ ಹಲವು ನಾಯಕರು ವೇದಿಕೆಯಲ್ಲಿದ್ದರು.

## ರನ್ನನ ಗದಾಯುದ್ಧ ಹಾಗೂ ಮೂರು ತಾಮ್ರಪಟಗಳನ್ನು ನಿರ್ಮಿಸುತ್ತಿರುವ ಡಾ.ಕಲ್ಯಾಣಿಯವರ ಕಾರ್ಯ ಪ್ರಶಂಸನೀಯ: ಜಿಲ್ಲಾಧಿಕಾರಿ ಜಾನಕಿ ಕೆ.ಎಂ

ಮುಧೋಳ: ಮುಧೋಳದಲ್ಲಿ ಸೂರ್ಯ ಚಂದ್ರರಿರುವರೆಗೂ ದಾಖಲಿಸುವ ಪ್ರಯತ್ನದಲ್ಲಿ ಕವಿ ಚಕ್ರವರ್ತಿ ರನ್ನನ ಗದಾಯುದ್ಧ ಹಾಗೂ ಮುಧೋಳದ ಕುರುಬರ ಮನೆಯಲ್ಲಿ ದೊರೆತ ಬಾದಾಮಿ ಚಾಲುಕ್ಯರ 6 ನೇ ಶತಮಾನದ ಪುಗವರ್ಮನ ಮೂರು ತಾಮ್ರಪಟಗಳನ್ನು ಹಾಗೂ ಗದಾಯುದ್ಧದ ಸುಮಾರು 250 ಕ್ಕೂ ಹೆಚ್ಚಾಗಿರುವ ಪುಟಗಳನ್ನು ಬರೆಯಿಸಿ ಈ ನೆಲದಲ್ಲಿ ಚಿರಸ್ಥಾಯಿಗೊಳಿಸುವುದಕ್ಕಾಗಿ ಮಹತ್ವದ ಕಾರ್ಯ ಮಾಡುತ್ತಿರುವ ಡಾ.ಸಂಗಮೇಶ ಕಲ್ಯಾಣಿಯವರ ಕಾರ್ಯ ಶ್ಲಾಘನೀಯ ಹಾಗೂ ಪ್ರಶಂಸನೀಯ ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಹೇಳಿದರು.

ನಗರದ ರನ್ನ ಸ್ಮಾರಕ ಭವನದಲ್ಲಿ ರಾಷ್ಟ್ರೀಯ ಸಂಶೋಧನಾ ವೇದಿಕೆ ಹಾಗೂ ಗೆಳೆಯರ ಬಳಗದ ವತಿಯಿಂದ ಆಯೋಜಿಸಲಾಗಿದ್ದ ಸಂಶೋಧಕ ಡಾ.ಸಂಗಮೇಶ ಕಲ್ಯಾಣಿ ರಚಿಸಿದ ಕವಿಚಕ್ರವರ್ತಿ ರನ್ನನ ಕಾವ್ಯ ಗದಾಯುದ್ಧದ 5 ತಾಮ್ರಪಟ ಹಾಗೂ ಬಾದಾಮಿ ಚಾಲುಕ್ಯರ ಕುರಿತ ತಾಮ್ರಪಟಗಳು, ಅವಲೋಕನ, ಅವ್ವ ಹೇಳಿದ ಕಥೆಗಳು




ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಕವಿತ್ರಯರಲ್ಲಿ ಒಬ್ಬರಾದ ಕವಿಚಕ್ರವರ್ತಿ ರನ್ನನು ಕನ್ನಡ ಸಾರಸ್ವತ ಲೋಕಕ್ಕೆ ಬಹುದೊಡ್ಡ ಕೊಡುಗೆ ನೀಡಿದ್ದಾರೆ. ರನ್ನನ ಕಾವ್ಯಗಳಲ್ಲಿ ಇತಿಹಾಸವಿದೆ. ಗದಾಯುದ್ಧ ಸಾವಿರಾರು ವರ್ಷಗಳಷ್ಟು ಹಳೆಯದಾದರೂ ಇನ್ನಷ್ಟು ಓದಬೇಕೆಂಬ ಹಂಬಲ ಇಮ್ಮಡಿಗೊಳ್ಳುತ್ತಲೇ ಇರುತ್ತದೆ. ರನ್ನನ ಕಾವ್ಯ ಹಾಗೂ ಬಾದಾಮಿ ಚಾಲುಕ್ಯರ ಕಾಲದ ಇತಿಹಾಸವನ್ನು ಅಜರಾಮರವಾಗಿರಿಸಲು ಸಂಶೋಧಕ ಡಾ.ಸಂಗಮೇಶ ಕಲ್ಯಾಣಿಯವರು ನಿರ್ಮಿಸುತ್ತಿರುವ ತಾಮ್ರಪಟಗಳು ಶಾಶ್ವತವಾಗಿ ಉಳಿಯಲಿವೆ. 250 ತಾಮ್ರಪಟಗಳು ಪೂರ್ಣಗೊಂಡ ಬಳಿಕ ಸರ್ಕಾರಕ್ಕೆ ಹಸ್ತಾಂತರ ಮಾಡುವುದು ಸ್ವಾಗತಾರ್ಹ ಹಾಗೂ ಪ್ರಶಂಸನೀಯ ಎಂದು ಅವರು ಹೇಳಿದರು.

ಹಂಪಿ ವಿಶ್ರಾಂತ ಉಪಕುಲಪತಿ ಡಾ.ಎ.ಮುರಿಗೆಪ್ಪ ಮಾತನಾಡಿ, ಕವಿರನ್ನ ಯುವಜನರಿಗೆ ಪ್ರೇರಣಾ ಶಕ್ತಿಯಾಗಿದ್ದು, ಪಂಪಭಾರತ, ಗದಾಯುದ್ಧ ಮುಂತಾದ ಕಾವ್ಯಗಳ ಹಾಗೂ ನಮ್ಮ ದೇಶದ ಇತಿಹಾಸದ ದಾಖಲೀಕರಣ ಮಾಡುವುದರಿಂದ ನಮ್ಮ ದೇಶದ ಜಾನಪದ ಸಾಹಿತ್ಯಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತಿದೆ ಎಂದು ತಿಳಿಸಿದರು.

ಜಮಖಂಡಿ ಶಾಸಕ ಡಾ.ಜಗದೀಶ ಗುಡಗುಂಟಿಮಠ ಮಾತನಾಡಿ, ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಪುಸ್ತಕಗಳು ಬಹಳಷ್ಟು ವರ್ಷಗಳು ಉಳಿಯುವುದಿಲ್ಲ. ತಾಮ್ರಪಟಗಳ ನಿರ್ಮಾಣ ಮಾಡುವುದರಿಂದ ಅವು ಶಾಶ್ವತವಾಗಿ ಉಳಿದು ಮುಂದಿನ ಪೀಳಿಗೆಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಬೆಂಗಳೂರಿನ ಬಾಲಕೃಷ್ಣ ಗುರೂಜಿ ಮಾತನಾಡಿ, ಭಾರತೀಯ ಸಂಸ್ಕೃತಿ ಭವ್ಯ ಇತಿಹಾಸ ಹೊಂದಿದ್ದು, ಇಂದಿನ ಪೀಳಿಗೆಯ ಜನ ಹಿಂದಿನ ತಲೆಮಾರಿನ ದೇಶಿ ಪದ್ಧತಿಗಳನ್ನು ಮರೆಯಬಾರದು. ಆ ಪದ್ಧತಿಗಳು ಮರಳಿ ಬರಬೇಕು ಎಂದರು.

ತಾಮ್ರಪಟದ ರಚನೆಕಾರ ಸಂಶೋಧಕ ಡಾ.ಸಂಗಮೇಶ ಕಲ್ಯಾಣಿ ಮಾತನಾಡಿ, 2025ರಲ್ಲಿ ಎರಡು ವಿಷಯಗಳಿಗೆ ಸಂಬಂಧಿಸಿದಂತೆ ತಾಮ್ರಪಟಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸಿ, ಸರ್ಕಾರಕ್ಕೆ ಹಸ್ತಾಂತರ ಮಾಡಲಾಗುವುದು ಎಂದು ತಿಳಿಸಿದರು.

ಮುಂಬೈನ ರನ್ನಸ್ಮಾರಕ ಸಭಾದ ಅಧ್ಯಕ್ಷ ಗುರುರಾಜ್ ಪೋತನೀಸ್ ಆಶಯ ನುಡಿಗಳನ್ನಾಡಿ, ಕನ್ನಡ ಸಾಹಿತ್ಯ ಲೋಕಕ್ಕೆ ರನ್ನನ ಕೊಡುಗೆ ಅಪಾರವಾಗಿದೆ. ರನ್ನನ ಹೆಸರು ಅಜರಾಮರವಾಗಿಸುವ ನಿಟ್ಟಿನಲ್ಲಿ ಕಾರ್ಯಗಳು ನಡೆಯಬೇಕಾಗಿದೆ ಎಂದು ಹೇಳಿದರು.

ಚಿಂತನಸಿರಿ ಗೌರವಾಧ್ಯಕ್ಷ ಡಾ.ಎಂ. ಆರ್.ದೇಸಾಯಿ ಅಧ್ಯಕ್ಷತೆ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಸಂಗಮೇಶ ಕಲ್ಯಾಣಿಯವರ ಕಾರ್ಯ ಮೆಚ್ಚಿ ಅವರ ಅಕ್ಕ ದಾನಮ್ಮ ಕಲ್ಯಾಣಿ ಬಂಗಾರದ ಪೆನ್ನನ್ನು ಕೊಡುಗೆಯಾಗಿ ನೀಡಿದರು.

ತಹಶೀಲದಾರ ವಿನೋದ ಹತ್ತಳ್ಳಿ, ತಾಲೂಕು ಕಾನಿಪ ಸಂಘದ ಅಧ್ಯಕ್ಷ ಬಿ.ರತ್ನಾಕರಶೆಟ್ಟಿ, ಕಸಾಪ ಅಧ್ಯಕ್ಷ ಆನಂದ ಪೂಜಾರಿ, ಮಾಜಿ ಅಧ್ಯಕ್ಷ ಎನ್.ವಿ.ತುಳಸಿಗೇರಿ, ಹಿರಿಯ ನಾಗರಿಕ ವೇದಿಕೆಯ ಅಧ್ಯಕ್ಷ ಕಲ್ಲಪ್ಪಣ್ಣಾ ಸಬರದ, ರಾಮಚಂದ್ರ ತುಳಸಿಗೇರಿ, ಸಿ.ಎಂ. ಜೋಶಿ, ಚಿಂತನಸಿರಿ ಬಳಗದ ಡಾ.ಡಿ. ಎಂ.ಬೆಣ್ಣೂರ, ರಮೇಶ ಅಣ್ಣಿಗೇರಿ, ಮಹಾದೇವಪ್ಪ ಮಡಿವಾಳರ, ಡಾ.ಪ್ರಕಾಶ ಚಿನ್ನಣ್ಣವರ, ತ್ರಿವೇಣಿ ಕಲ್ಯಾಣಿ, ಮಹಾಲಿಂಗಪ್ಪ ಬಂಡಿ, ಮಂಜುನಾಥ ಒಂಟಗೋಡಿ ಇತರರು ಇದ್ದರು

## ಸಂಸದೆ, ನಟಿ ನವನೀತ್ ರಾಣಾಗೆ ಜೀವ ಬೆದರಿಕೆ, ಪೊಲೀಸ್ ದೂರು ದಾಖಲು



ಮುಂಬೈ: ಮಹಾರಾಷ್ಟ್ರದ ಸಂಸದೆ ಹಾಗೂ ನಟಿ ನವನೀತ್ ರಾಣಾಗೆ ಜೀವಬೆದ–ರಿಕೆ ಸಂದೇಶ ಬಂದಿದ್ದು, ಈ ಸಂಬಂಧ ಆಕೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ ಎಂದು ತಿಳಿದುಬಂದಿದೆ.

ಮಹಾರಾಷ್ಟ್ರದ ಅಮರಾವತಿ ಸಂಸದೆಯಾಗಿರುವ ನವನೀತ್ ರಾಣಾ ಅವರ ವಾಟ್ಸಾಪ್ ಸಂಖ್ಯೆಗೆ ಬೆದರಿಕೆ ಆಡಿಯೋ ಸಂದೇಶ ಬಂದಿದ್ದು, ಈ ಸಂಬಂಧ ಆಕೆ ಪೊಲೀಸರಿಗೆ ದೂರು ನೀಡಿದ್ದಾರೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಎಫ್‌ಐಆರ್‌ನ ಪ್ರಕಾರ, ಬೆದರಿಕೆ ಆಡಿಯೋ ಸಂದೇಶ ಕಳುಹಿಸಿರುವ ಅಪರಿಚಿತ ವ್ಯಕ್ತಿ ಪಕ್ಷೇತರ ಸಂಸದೆಯಾಗಿರುವ ನವನೀತ್ ರಾಣಾ ವಿರುದ್ಧ ಆಕ್ಷೇಪಾರ್ಹ ಭಾಷೆ ಬಳಸಿ ಬೆದರಿಕೆ ಹಾಕಿದ್ದಾನೆ.

"ಮಾರ್ಚ್ 3 ರಂದು ರಾಣಾ ಅವರ ಫೋನ್ ಸಂಖ್ಯೆಗೆ ಈ ಬೆದರಿಕೆ ಸಂದೇಶ ಬಂದಿದ್ದು, ನಂತರ ಅವರ ಆಪ್ತ ಸಹಾಯಕ ಪೊಲೀಸರಿಗೆ ದೂರು ನೀಡಿದ್ದಾರೆ. ಈ ಸಂಬಂಧ ನಿನ್ನೆ ಅಂದರೆ ಮಂಗಳವಾರ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬೆದರಿಕೆ ಆಡಿಯೋ ಕ್ಲಿಪ್ ನಲ್ಲಿ ನವನೀತ್ ರಾಣಾ ಅವರನ್ನು ಗು–ರಿಯಾಗಿಸಿದ್ದು ಮಾತ್ರವಲ್ಲದೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಲಾಗಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ನವನೀತ್ ರಾಣಾ ಅವರು ಸಂಸತ್ ನಲ್ಲಿ ಅಸಾದುದ್ದೀನ್ ಒವೈಸಿ ಅವರಿಗೆ ಪ್ರತಿಕ್ರಿಯಿಸಿತ್ತಾ, ಈ ದೇಶದಲ್ಲಿ ಇರಬೇಕಾದರೆ ಈ ನೆಲದ ಸಂಸ್ಕೃತಿಯನ್ನು ಗೌರವಿಸಬೇಕು. ಶ್ರೀರಾಮ ನಮ್ಮ ಆರಾಧ್ಯ ದೈವ.. ಹೀಗಾಗಿ ಈ ದೇಶದಲ್ಲಿ ಇರಬೇಕು ಎಂದರೆ ಜೈ ಶ್ರೀರಾಮ್ ಕೂಗಲೇ ಬೇಕು ಎಂದು ಹೇಳಿದ್ದರು. ಈ ವಿಡಿಯೋ ವ್ಯಾಪಕ ವೈರಲ್ ಆಗಿತ್ತು.

## ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಶಂಕುಸ್ಥಾಪನೆ

# ಅಥಣಿ ತಾಲೂಕಿನ 95% ಪ್ರತಿಶತ ಪ್ರದೇಶಕ್ಕೆ ನೀರಾವರಿ ಸೌಲಭ್ಯ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಳಗಾವಿ: ಅಥಣಿ ತಾಲೂಕಿನ ರೈತರ ಸಮಸ್ಯೆಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯನ್ನು ಜಾರಿಗೆ ತರಲಾಗಿದೆ. ತೆಲಸಂಗ, ಖಿಲಾರದಡ್ಡಿ, ಬೊಸಲೆವಾಡಿ, ಕನ್ನಾಳ, ಪಡತರವಾಡಿ, ಬನ್ನೂರು, ಕಕಮರಿ, ಕೊಟ್ಟಲಗಿ ಹಾಗೂ ಕರಿಮಸೂತಿ ಗ್ರಾಮಗಳನ್ನು ಒಳಗೊಂಡಂತೆ ಸುಮಾರು 19274.00 ಹೆಕ್ಟೇರ್ ಪ್ರದೇಶಕ್ಕೆ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆ ಅನುಕೂಲವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಜಲಸಂಪನ್ಮೂಲ ಇಲಾಖೆ ವತಿಯಿಂದ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕೊಟ್ಟಲಗಿಯಲ್ಲಿ ಬುಧವಾರ (ಮಾ.06) ನಡೆದ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆ ಬಹಳ ದಿನಗಳಿಂದ ನೆನೆಗುದಿಗೆ ಬಿದ್ದಿತ್ತು. ಕೃಷ್ಣಾ ನದಿಯ ಎಡದಂಡೆಯಿಂದ 2.903 ಟಿ.ಎಂ.ಸಿ ನೀರು ಎತ್ತುವ ಮೂಲಕ ರೈತರ ಅನುಕೂಲಕ್ಕಾಗಿ ಯೋಜನೆ ಪ್ರಾರಂಭಿಸಲಾಗಿದೆ.

ಇಲ್ಲಿನ ಶಾಸಕರ ಬೇಡಿಕೆಯಂತೆ ಅಂದಾಜು 1486 ಕೋಟಿ ರೂಪಾಯಿ ವೆಚ್ಚದಲ್ಲಿ ಕಾಮಗಾರಿ ಚಾಲನೆಗೊಳ್ಳಲಿದೆ. ನೀರು ಲಭ್ಯತೆಯಿದ್ದ ಪ್ರದೇಶದ ಪ್ರತಿ ಹನಿ ನೀರು ರೈತರಿಗೆ ಉಪಯೋಗವಾಗಬೇಕು. ರೈತರ ಜಮೀನುಗಳಿಗೆ ಹರಿ ಬಿಡುವ ಮೂಲಕ ನೀರು ಸಮರ್ಪಕ ಬಳಕೆಯಾಗಬೇಕು ಎಂದು ಹೇಳಿದರು.

ಈ ಯೋಜನೆಯಿಂದ ಅಥಣಿ ತಾಲೂಕಿನ 95% ಪ್ರತಿಶತ ನಿರಾವರಿ ಸಮಸ್ಯೆ ಕಡಿಮೆಯಾಗಲಿದೆ. ಕೆರೆಗಳಲ್ಲಿ ನೀರು ತುಂಬಿಸುವ ಮೂಲಕ ಅಂತರ್ಜಲ ಮೇಲೆತ್ತುವ ಕಾರ್ಯಕ್ಕೆ ಸರ್ಕಾರ ಮುಂದಾಗಿದೆ.

ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ ಇತರೆ ಜಿಲ್ಲೆಗಳಲ್ಲಿ ಕೆರೆ ತುಂಬಿಸುವ ಕೆಲಸಗಳನ್ನು ಕೈಗೆತ್ತಿಕೊಳ್ಳಲಾಗಿದೆ ಇದರಿಂದ ಅಂತರ್ಜಾಲ ಕುಸಿತ ತಪ್ಪಿಸಬಹುದು ಎಂದು ತಿಳಿಸಿದರು.

**ಮಹಾದಾಯಿ ಯೋಜನೆಗೆ ಜಾರಿಗೆ ಸರ್ಕಾರ ಸಿದ್ಧ:**

ಸರ್ಕಾರ ಈ ಹಿಂದೆಯೂ ಅಧಿಕಾರದ ಅವಧಿಯಲ್ಲಿ ತಿಳಿಸಿದಂತೆ ನೀರಾವರಿ ಯೋಜನೆಗಳಿಗೆ ಪ್ರತಿ ವರ್ಷ 10 ಸಾವಿರ ಕೋಟಿ ರೂಪಾಯಿ ಖರ್ಚು ಮಾಡುವುದಾಗಿ ಭರವಸೆ ನೀಡಲಾಗಿತ್ತು. ಅದರಂತೆ ನೀರಾವರಿ ಅಭಿವೃದ್ಧಿ ಕಾಮಗಾರಿಗಳನ್ನು ಪ್ರಾರಂಭಿಸಿದ್ದೇವೆ. ಮಹಾದಾಯಿ ಯೋಜನೆ ಜಾರಿಗೆ ನ್ಯಾಯಾಲಯದಿಂದ ತಡೆಯಾಜ್ಞೆಯಿದೆ. ನ್ಯಾಯಾಲಯದಿಂದ ಕ್ಲಿಯರೆನ್ಸ್ ಸಿಕ್ಕರೆ ಉತ್ತರ ಕರ್ನಾಟಕ ಭಾಗದ ಜನರಿಗೆ ಅಭಿವೃದ್ಧಿಗೆ ಕೂಡಲೇ ಮಹಾದಾಯಿ ಯೋಜನೆ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ರಾಜ್ಯ ಸರ್ಕಾರ ಕೊಟ್ಟ ಮಾತಿನಂತೆ ಪ್ರಣಾಳಿಕೆ ನೀಡಿದ ಭರವಸೆಗಳನ್ನು ಈಡೇರಿಸಿದೆ. ಚುನಾವಣೆಗಿಂತ ಮುಂಚಿತವಾಗಿ ಹೇಳಿದ ಐದು ಪಂಚ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಜಾರಿಗೆ ತರಲಾಗಿದೆ. ಸರ್ಕಾರ ರಾಜ್ಯದ ಎಲ್ಲ ಹೆಣ್ಣುಮಕ್ಕಳಿಗೆ ಶಕ್ತಿ ಯೋಜನೆ ಮೂಲಕ ರಾಜ್ಯದಲ್ಲಿ ಉಚಿತ ಬಸ್ ಪ್ರಯಾಣ ಚಿಮುಂದಿನ ವರ್ಷ ನೀರಾವರಿ, ರಸ್ತೆ ನಿರ್ಮಾಣ, ಮೂಲಭೂತ ಸೌಕರ್ಯ, ಗ್ಯಾರಂಟಿ ಯೋಜನೆಗಳು ಸೇರಿದಂತೆ ಎಲ್ಲಾ ಯೋಜನೆಗಳು, ಅಭಿವೃದ್ಧಿ ಕಾಮಗಾರಿಗಳಿಗೆ 54 ಸಾವಿರ ಕೋಟಿ ರೂಪಾಯಿಗಳನ್ನು ವ್ಯಯ ಮಾಡಲಾಗುವುದು ಎಂದು ತಿಳಿಸಿದರು.

**ಆಂಜನೇಯ ಜನ್ಮಸ್ಥಳ ಅಭಿವೃದ್ಧಿಗೆ ಕ್ರಿಯಾ ಯೋಜನೆ:**

ಗಂಗಾವತಿ ತಾಲೂಕಿನ ಆಂಜನೇಯ ಜನ್ಮ ಸ್ಥಳ ಅಂಜನಾದ್ರಿ ಬೆಟ್ಟದ ಅಭಿವೃದ್ಧಿಗೆ 100 ಕೋಟಿ ಅನುದಾನ ಒದಗಿಸಲಾಗುವುದು. ಸಾಮಾಜಿಕ ಕ್ರಾಂತಿ ಮಾಡಿದ ವಿಶ್ವಗುರು ಬಸವಣ್ಣನವರನ್ನು ನಾಡಿನ ಸಾಂಸ್ಕೃತಿಕ ನಾಯಕ ಎಂದು ರಾಜ್ಯ ಸರ್ಕಾರ ಘೋಷಣೆ ಮಾಡಿದೆ. ಅದೇ ರೀತಿಯಲ್ಲಿ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಜಗಜ್ಯೋತಿ ಬಸವಣ್ಣವರ ಫೋಟೋ ಇಡುವುದು ಕಡ್ಡಾಯ ಎಂದು ಸರಕಾರ ಆದೇಶ ಹೊರಡಿಸಲಾಗಿದೆ.

ಬಡವರ ಕಲ್ಯಾಣಕ್ಕಾಗಿ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ.



ಪ್ರತಿ ತಿಂಗಳು 1 ಕೋಟಿ 20 ಲಕ್ಷಕ್ಕೂ ಅಧಿಕ ಕುಟುಂಬಗಳಿಗೆ ಪ್ರತಿ ತಿಂಗಳಿಗೆ 2 ಸಾವಿರ ನೀಡುವುದರ ಮೂಲಕ ಗೃಹಲಕ್ಷ್ಮೀ ಯೋಜನೆ ಜಾರಿಗೆ ತಂದಿರುವುದು ರಾಜ್ಯದ ಜನರಿಗೆ ಅನುಕೂಲದಾಯಕವಾಗಿದೆ. ಪೆಟ್ರೋಲ್, ಡೀಸೆಲ್, ದವಸ ಧಾನ್ಯಗಳ ಬೆಲೆ ಏರಿಕೆಗೆ ರಾಜ್ಯದ ಜನತೆ ಬೇಸತ್ತು ಹೋಗಿತ್ತು. ಸರ್ಕಾರದ ಗ್ಯಾರೆಂಟಿ ಯೋಜನೆಗಳ ಮೂಲಕ ರಾಜ್ಯದ ಜನತೆಗೆ ಬಹಳ ಅನುಕೂಲವಾಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಇದಕ್ಕೂ ಮುನ್ನ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಅನ್ನಭಾಗ್ಯ, ಗ್ರಹಲಕ್ಷ್ಮೀ, ಶಕ್ತಿ ಯೋಜನೆ, ಗೃಹಜ್ಯೋತಿ ಹಾಗೂ ಯುವನಿಧಿ ಯೋಜನೆಗಳನ್ನು ರಾಜ್ಯದ ಜನತೆಯ ಮನೆ ಬಾಗಿಲಿಗೆ ತಲುಪಿಸಲಾಗಿದೆ. ಈ ಭಾಗದ ಅಭಿವೃದ್ಧಿಗೆ ಶಾಸಕರು ನಿರಂತರ ಶ್ರಮಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಸಿವು ಮುಕ್ತ ರಾಜ್ಯ ನಿರ್ಮಾಣಕ್ಕೆ ಸರ್ಕಾರ ಅನ್ನಭಾಗ್ಯ ಯೋಜನೆ ಜಾರಿಗೆ ತಂದಿದೆ. ಗೃಹಜ್ಯೋತಿ ಯೋಜನೆಯಡಿ 200 ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ. ರಾಜ್ಯದ ಕುಟುಂಬಗಳ ಯಜಮಾನಿಯರಿಗೆ ಪ್ರತಿ ತಿಂಗಳು 2 ಸಾವಿರ ಹಣ ಅವರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತಿದೆ. ಶಕ್ತಿ ಯೋಜನೆ ಮೂಲಕ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.

ಬೆಳಗಾವಿ ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಅದೇ ರೀತಿಯಲ್ಲಿ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಕೂಡ ಪ್ರಾರಂಭಿಸಲಾಗಿದೆ. ಇದರಿಂದ ಸುತ್ತಮುತ್ತಲಿನ ಗ್ರಾಮಗಳ ನೀರಿನ ಸಮಸ್ಯೆ ಬಗೆ ಹರಿಯಲಿದೆ. ಮುಂಬರುವ 2 ವರ್ಷಗಳಲ್ಲಿ ಏತ ನೀರಾವರಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಹೇಳಿದರು.

**ಗ್ಯಾರೆಂಟಿಗಳ ಯೋಜನೆಗಳ ಸಮರ್ಪಕ ಅನುಷ್ಠಾನ;**

ಚುನಾವಣೆಯ ಪೂರ್ವದಲ್ಲಿ ರಾಜ್ಯಕ್ಕೆ ನೀಡಿದ ಭರವಸೆಯನ್ನು ಸರ್ಕಾರ ಈಡೇರಿಸಿದೆ. ಬಸವಣ್ಣನವರ ವಚನದಂತೆ ನುಡಿದಂತೆ ನಡೆದ ಸರ್ಕಾರ ನಮ್ಮದಾಗಿದೆ. ಈ ಭಾಗದ ರೈತರು ಸ್ವಾವಲಂಬಿ ಜೀವನ ಸಾಗಿಸಲು ನೀರಿನ ಅವಶ್ಯಕತೆ ಬಹಳಷ್ಟಿದೆ. ಅಥಣಿ ತಾಲೂಕಿನ ಪೂರ್ವಭಾಗದ ಆಸೆಯಂತೆ ಜನರ ಆಶೋತ್ತರಗಳನ್ನು ಗಮನದಲ್ಲಿಟ್ಟುಕೊಂಡು ಇಂದು ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಶಂಕುಸ್ಥಾಪನೆ ನೆರವೇರಿಸಲಾಗಿದೆ ಎಂದು ಅಥಣಿ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಕೆಳ ವರ್ಗದ ಬಡ ಜನರು ನೆಮ್ಮದಿಯಿಂದ ಇದ್ದಾರೆ. ಅದರಂತೆ ರಾಜ್ಯದ ಗಡಿ ಭಾಗದ ಸಾಕಷ್ಟು ಹಳ್ಳಿಗಳಲ್ಲಿ ಜನರಿಗೆ, ಜಾನುವಾರುಗಳಿಗೆ, ಪಕ್ಷಿ ಪ್ರಾಣಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಬೇಕು. ಅಥಣಿ ತಾಲೂಕಿನ ರೈತರ ಮಕ್ಕಳ ಅನುಕೂಲಕ್ಕಾಗಿ ಕೃಷಿ ಕಾಲೇಜು ನಿರ್ಮಾಣಕ್ಕೆ ಶಾಸಕ ಲಕ್ಷ್ಮಣ ಸವದಿ ಅವರು ಮನವಿ ಮಾಡಿಕೊಂಡರು.

**ಏತ ನೀರಾವರಿ ಯೋಜನೆ; ಬರಗಾಲ ನಿರ್ವಹಣೆ ಸಹಾಯವಾಗಲಿದೆ:**

ಸುಮಾರು ವರ್ಷಗಳಿಂದ ಈ ಭಾಗದ ರೈತರಿಗೆ ನೀರಾವರಿ ಯೋಜನೆಯ ಅವಶ್ಯಕತೆಯಿತ್ತು. ರೈತರ ಅಭಿವೃದ್ಧಿಗೆ ಸರ್ಕಾರ ಸದಾ ಸಿದ್ಧವಿದೆ. ಪ್ರತಿ ವರ್ಷ ಬರಗಾಲದಲ್ಲಿ ರೈತರಿಗೆ ಬಹಳ ತೊಂದರೆ ಆಗುತಿತ್ತು. ಈ ನೀರಾವರಿ ಯೋಜನೆ ಪ್ರಾರಂಭದಿಂದ ರೈತರು ಸಂತಸ ವ್ಯಕ್ತಪಡಿಸುತ್ತಿದ್ದಾರೆ. ರಾಜ್ಯದಲ್ಲಿ ಸಮಗ್ರ ನೀರಾವರಿ ಅಭಿವೃದ್ಧಿಗೆ ಸರ್ಕಾರ ಬದ್ದವಿದೆ ಎಂದು ಬ್ರಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಮ್. ಬಿ ಪಾಟೀಲ ಅವರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಮಾತನಾಡಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡಪರ ಯೋಜನೆಗಳಾಗಿವೆ. ಗೃಹಲಕ್ಷ್ಮಿ ಯೋಜನೆಯಡಿ ಕುಟುಂಬದ ಯಜಮನಿಯರಿಗೆ ತಿಂಗಳಿಗೆ 2 ಸಾವಿರ ನೀಡುವುದರ ಮೂಲಕ ಪ್ರತಿ ವರ್ಷ 24 ಸಾವಿರ ರೂಪಾಯಿಗಳನ್ನು ಅವರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತಿದೆ.

ಸುಮಾರು 1486 ಕೋಟಿ ವೆಚ್ಚದಲ್ಲಿ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆ ಪ್ರಾಂಭಿಸುವ ಮೂಲಕ ಈ ಭಾಗದ ರೈತರ ಅಭಿವೃದ್ಧಿಗೆ ಸರ್ಕಾರ ಮುಂದಾಗಿದೆ. ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ತಿಂಗಳಿಗೆ 5 ಸಾವಿರ ಕೋಟಿ ರೂಪಾಯಿಯನ್ನು ಸರ್ಕಾರ ವ್ಯಯ ಮಾಡುತ್ತಿದೆ. ಅದರ ಜೊತೆಗೆ ಸರ್ಕಾರ ಸಾಕಷ್ಟು ಅಭಿವೃದ್ಧಿಪರ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳುತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ತಿಳಿಸಿದರು.

ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಪ್ರಾರಂಭವಾಗಲು ಶಾಸಕ ಲಕ್ಷ್ಮಣ ಸವದಿ ಅವರ ಪ್ರಾಮಾಣಿಕ ಪ್ರಯತ್ನ ಬಹಳಷ್ಟಿದೆ. ಈ ಭಾಗದ ರೈತರಿಗೆ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆ ಸಂಜೀವಿನಿ ಆಗಲಿದೆ. ಕೇವಲ ರೈತರಿಗೆ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಆಗಲಿದೆ.

ಜಿಲ್ಲೆಯ ವಿವಿಧ ಭಾಗಗಳಲ್ಲಿ ಉತ್ತಮ ರಸ್ತೆ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಯಿಂದ ಸಾಕಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಮುಂದಿನ ದಿನಗಳಲ್ಲಿ ತ್ವರಿತವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

**ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಶಂಕುಸ್ಥಾಪನೆ:**

ಇದಕ್ಕೂ ಮುಂಚೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಲೋಕೋಪಯೋಗಿ ಅಥಣಿ ಶಾಸಕ ಲಕ್ಷ್ಮಣ ಸವದಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಗುದ್ದಲಿ ಪೂಜೆ ಸಲ್ಲಿಸುವುದರ ಮೂಲಕ ಕೊಟ್ಟಲಗಿ (ಅಮ್ಮಾಜೇಶ್ವರಿ) ಏತ ನೀರಾವರಿ ಯೋಜನೆಯ ಶಂಕುಸ್ಥಾಪನೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಅಬಕಾರಿ ಸಚಿವ ಆರ್ಬಿ. ತಿಮ್ಮಾಪೂರ, ಸರ್ಕಾರದ ಮುಖ್ಯ ಸಚೇತಕ ಅಶೋಕ ಪಟ್ಟಣ, ವಿಧಾನ ಪರಿಷತ್ ಶಾಸಕ ಚನ್ನರಾಜ ಹಟ್ಟಿಹೊಳಿ, ವಿಧಾನ ಸಭೆ ಶಾಸಕ ಮಹೇಂದ್ರ ತಮ್ಮಣ್ಣವರ, ಮಹಾರಾಷ್ಟ್ರ ಜತ್ತ ಶಾಸಕರಾದ ವಿಕ್ರಾಂತ ಸಾಮಂತ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರಾಕೇಶ ಸಿಂಗ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಬೆಳಗಾವಿ ಉತ್ತರ ವಲಯ ಪೋಲಿಸ ಮಹಾನೀರಿಕ್ಷಕ ವಿಕಾಶ ಕುಮಾರ ವಿಕಾಶ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಎಸ್ ಗುಳೇದ, ಕೊಟ್ಟಲಗಿ ಗ್ರಾಮ ಪಂಚಾಯತ ಅಧ್ಯಕ್ಷೆ ನೀಲವ್ವ ತೇಲಿ, ಅಥಣಿ ತಾಲೂಕಿನ ಸುತ್ತ ಮುತ್ತಲಿನ ಗ್ರಾಮದ ಸಾವಿರಾರು ಜನರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಮಾ.8 ರಂದು ಮಾಂಸಾಹಾರಿ ಅಂಗಡಿಗಳು ಬಂದ: ಸಾರ್ವಜನಿಕರ ಗಮನಕೆ

ಬೆಳಗಾವಿ: ಮಹಾಶಿವರಾತ್ರಿ ನಿಮಿತ್ತ ಮಾ. 8(ಶುಕ್ರವಾರ) ರಂದು ಬೆಳಗಾವಿ ಜಿಲ್ಲೆಯ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲ ಕಸಾಯಿಖಾನೆ/ಮಾಂಸಾಹಾರಿ ಅಂಗಡಿಗಳನ್ನು ಬಂದ ಮಾಡಲು ಅಂಗಡಿ ಮಾಲಿಕರಿಗೆ ಆದೇಶವನ್ನು ಹೊರಡಿಸಲಾಗಿದೆ. ಒಂದು ವೇಳೆ ಆದೇಶವನ್ನು ಉಲಂಘನೆ ಮಾಡಿದರೆ ಅಂತವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಸುವರ್ಣ ಸಂಭ್ರಮ: ಜ್ಯೋತಿ ರಥಯಾತ್ರೆ ಮಾ.7 ರಂದು ಬೆಳಗಾವಿ ನಗರಕ್ಕೆ

ಬೆಳಗಾವಿ: ಕರ್ನಾಟಕ ಸಂಭ್ರಮ – 50ರ ಅಂಗವಾಗಿ ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಜ್ಯೋತಿ ರಥಯಾತ್ರೆಯು ಗುರುವಾರ(ಮಾ.7) ಬೆಳಗ್ಗೆ 10 ಗಂಟೆಗೆ ಬೆಳಗಾವಿ ನಗರದ ಚನ್ನಮ್ಮ ವೃತ್ತಕ್ಕೆ ಆಗಮಿಸಲಿದೆ.

ರಾಜ್ಯದಾದ್ಯಂತ ಸಂಚರಿಸುತ್ತಿರುವ ರಥಯಾತ್ರೆಯು ಫೆ,17 ರಂದು ಅಥಣಿ ಮೂಲಕ ಬೆಳಗಾವಿ ಜಿಲ್ಲೆಯನ್ನು ಪ್ರವೇಶಿಸಿರುತ್ತದೆ.

ಈಗಾಗಲೇ ಅಥಣಿ, ಕಾಗವಾಡ, ನಿಪ್ಪಾಣಿ, ಚಿಕ್ಕೋಡಿ, ಹುಕ್ಕೇರಿ ತಾಲ್ಲೂಕುಗಳಲ್ಲಿ ಸಂಚರಿಸಿದ್ದು, ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಅಧಿಕಾರಿಗಳು ಹಾಗೂ ಗಣ್ಯರಿಂದ ಅದ್ದೂರಿ ಸ್ವಾಗತ ನೀಡಲಾಗಿರುತ್ತದೆ.

ಗುರುವಾರ(ಮಾ.7) ಬೆಳಗಾವಿ ನಗರಕ್ಕೆ ಆಗಮಿಸಲಿರುವ ರಥಯಾತ್ರೆಯನ್ನು ನಗರದ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ಗಣ್ಯರು ಬರಮಾಡಿಕೊಳ್ಳಲಿದ್ದಾರೆ.

ನಗರದಲ್ಲಿ ಸಂಚರಿಸಿದ ಬಳಿಕ ಖಾನಾಪುರ, ಚನ್ನಮ್ಮನ ಕಿತ್ತೂರು, ಬೈಲಹೊಂಗಲ, ಗೋಕಾಕ, ಮೂಡಲಗಿ, ರಾಮದುರ್ಗ ತಾಲ್ಲೂಕುಗಳಲ್ಲಿ ಸಂಚರಿಸಿ ಸವದತ್ತಿ ಮೂಲಕ ಧಾರವಾಡ ಜಿಲ್ಲೆಗೆ ತೆರಳಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ರಥಯಾತ್ರೆ ಸ್ವಾಗತ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅವರು ಕೋರಿದ್ದಾರೆ.

## ಇಂದಿನಿಂದ ಆಲಮಟ್ಟಿ ಜಲಾಶಯ: 4 ಟಿಎಂಸಿ ಅಡಿ ನೀರು ಬಿಡುಗಡೆ

ಆಲಮಟ್ಟಿ: ಬೆಳಗಾವಿ ಪ್ರಾದೇಶಿಕ ಆಯುಕ್ತರ ಆದೇಶದ ಮೇರೆಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಆಲಮಟ್ಟಿ ಜಲಾಶಯದಿಂದ ಮಾರ್ಚ್ 6ರಿಂದ ಕೃಷ್ಣಾ ನದಿಗೆ ನೀರು ಬಿಡಲಾಗುತ್ತದೆ.

ಬೆಳಿಗ್ಗೆ 5000 ಕ್ಯೂಸೆಕ್ ನೀರನ್ನು ನದಿ ಪಾತ್ರಕ್ಕೆ ಹರಿಸಿ ನಂತರ ಅದನ್ನು 10,000 ಕ್ಯೂಸೆಕ್‌ಗೆ ಹೆಚ್ಚಿಸಲಾಗುತ್ತದೆ. ಕೃಷ್ಣಾ ನದಿ ಪಾತ್ರದ ಜನತೆ ಎಚ್ಚರದಿಂದಿರಲು ಸೂಚಿಸಲಾಗಿದೆ.

4 ಟಿಎಂಸಿ ಅಡಿ ನೀರು: ಕುಡಿಯುವ ನೀರಿನ ಉದ್ದೇಶಕ್ಕಾಗಿ ಒಟ್ಟಾರೆ 4 ಟಿಎಂಸಿ ಅಡಿ ನೀರನ್ನು ಹರಿಸಲಾಗುತ್ತದೆ. ಮಾರ್ಚ್ 6ರ ಬೆಳಿಗ್ಗೆ 8ಕ್ಕೆ ಜಲಾಶಯದ ಬಲಭಾಗದ ವಿದ್ಯುತ್ ಉತ್ಪಾದನಾ ಕೇಂದ್ರದ ಮೂಲಕ ನೀರನ್ನು ಹರಿಸಲಾಗುತ್ತದೆ ಎಂದು ಎಂಜಿನಿಯರ್ ಡಿ.ಬಸವರಾಜ ತಿಳಿಸಿದರು.

## ಕ್ಯಾಂಟರ್ ಪಲ್ಟಿ; ಮೂವರು ದುರ್ಮರಣ

ಗದಗ: ಕ್ಯಾಂಟರ್ ವಾಹನ ಪಲ್ಟಿಯಾಗಿ ಮೂವರು ಮೃತಪಟ್ಟ ಘಟನೆ ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಹಳ್ಳಿಗುಡಿ ಬಳಿ ನಡೆದಿದೆ.

ನವೀನ್ ಕುಂಬಾರ್ (23) ಎಂಬುವವರು ಸ್ಥಳದಲ್ಲಿ ಮೃತಪಟ್ಟಿದ್ದು, ನಾಗಪ್ಪ ಕಾಳಿ (23) ಗಂಗಪ್ಪ (22) ಎಂಬುವವರು ಚಿಕಿತ್ಸೆ ಫಲಿಸದೇ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ವೇಗವಾಗಿ ಬಂದ ಕ್ಯಾಂಟರ್ ನಿಯಂತ್ರಣ ತಪ್ಪಿ ಪಲ್ಟಿ ಹೊಡೆದಿದೆ ಎಂದು ತಿಳಿದು ಬಂದಿದೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಗ್ರಾಮೀಣ ಪ್ರದೇಶಗಳಲ್ಲಿಯೆ ಹೆಚ್ಚು ಉತ್ತಮ ಶಿಕ್ಷಣ

ಕೆಂಭಾವಿ: ಶಿಕ್ಷಣವೆಂಬದು ಅರಳುವ ಬದುಕಿಗೆ ಅಕ್ಷಯದ ಬುತ್ತಿಯಿದ್ದಂತೆ ಎಂದು ಶಿಕ್ಷಕ ಸಾಹಿತಿ ಶಿವಶರಣಪ್ಪ ಶಿರೂರ ಹೇಳಿದರು. ಸಮೀಪದ ಯಾಳಗಿಯ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ 7 ನೆ ತರಗತಿ ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಸಮಾರಂಭ, ರಾಷ್ಟ್ರೀಯ ವಿಜ್ಞಾನ ದಿನಾಚರಣೆ, ವರ್ಗಾವಣೆಗೊಂಡ ಹಾಗೂ ನಿವೃತ್ತಿ ಹೊಂದಿದ ಸಿಬ್ಬಂದಿಗಳ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಮಕ್ಕಳು ಹಿರಿಯರು ಗಳಿಸಿದ ಆಸ್ತಿಯನ್ನು ನಂಬಿ ಬದುಕುವದಕ್ಕಿಂತ ಬಾಳಿನ ಭವಿಷ್ಯದ ಬೆಳಕಾಗುವ ವಿದ್ಯೆಯನ್ನು ನಂಬಿ ಶ್ರಮದಿಂದ ಜೇನು ನೊಣದಂತೆ ನಿರಂತರ ಹೋರಾಟ, ವಿನಯದಿಂದ ವಿದ್ಯೆಯನ್ನು ಗಳಿಸಲು ಮಕ್ಕಳಿಗೆ ತಿಳಿ ಹೇಳಿದರು. ದೊಡ್ಡ ದೊಡ್ಡ ಪಟ್ಟಣಗಳಿಗಿಂತ ಗ್ರಾಮೀಣ ಪ್ರದೇಶಗಳಲ್ಲಿಯೆ ಹೆಚ್ಚು ಉತ್ತಮ ಶಿಕ್ಷಣ ದೊರೆಯುತ್ತಿದೆ. ಮನೆಯೆ ತಾನೆ ಮೊದಲ ಪಾಠಶಾಲೆ, ತಾಯಿ ತಾನೆ ಮೊದಲು ಗುರುವೆಂಬಂತೆ ಮಕ್ಕಳು ಪಾಲಕರ ಹತ್ತಿರವಿದ್ದು ವಿದ್ಯೆ ಕಲಿತರೆ ಅದಕ್ಕೆ ಹೆಚ್ಚು ಮೌಲ್ಯವಿರುತ್ತದೆ ಎಂದು ಹೇಳಿದರು.



ಮುಖಂಡರಾದ ಬಸನಗೌಡ ಹೊಸಮನಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕ ಎಸ್. ಎನ್.ಪಾಟೀಲ ಪ್ರಾಸ್ತಾವಿಕ ಮಾತನಾಡಿದರು.

ಪೂಜ್ಯ ಸಿದ್ದಪ್ಪ ಮುತ್ಯಾ ಸಾನಿಧ್ಯ ವಹಿಸಿದ್ದರು. ನಾಗೇಶ ಕುಂಬಾರ ಅಧ್ಯಕ್ಷತೆ ವಹಿಸಿದ್ದರು. ಮುಖಂಡರಾದ ಶ್ರೀನಿವಾಸರೆಡ್ಡಿ ಮಾಲಿಪಾಟೀಲ, ಮಲ್ಲನಗೌಡ ಮಾಲಿಪಾಟೀಲ, ಮಹೇಶ ಹುಜರತಿ, ಮಲ್ಲಣ್ಣ ಮಾನಸುಣಗಿ, ಬಸವರಾಜ ಹೆಳವರ, ಮಲ್ಲು ಸಜ್ಜನ, ರಾಮನಗೌಡ ಢವಳಗಿ, ಶ್ರೀಶೈಲ್ ಮಹಾಮನಿ, ಶಿವನಗೌಡ ಪಾಟೀಲ, ಜಟ್ಟೆಪ್ಪ ಬೆಕಿನಾಳ, ಸಿಆರ್ಪಿ ಚೆನ್ನಪ ಹಾಗೂ ತಿಪ್ಪಣ್ಣ, ಶಿವಶರಣ ನಾಗರೆಡ್ಡಿ, ಮಹಾದೇವಪ್ಪ ಜಲಪುರ, ಮಹಾಂತೇಶ, ನಿಂಗಮ್ಮ ನಾಯ್ಕೋಡಿ, ಮುಖ್ಯಗುರು ಬೀರಪ್ಪ ಕಟ್ಟಿಮನಿ ಸೇರಿದಂತೆ ಶಿಕ್ಷಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿದ್ದರು.

ವರ್ಗಾವಣೆಗೊಂಡ ಶಿಕ್ಷಕ ಅಲ್ತಾಫ್ ಅತ್ತಾರ, ಸಿದ್ದಣ್ಣ ಧನಗೊಂಡ, ಶಿವಶರಣಪ್ಪ ಶಿರೂರ, ನಿವೃತ್ತಿ ಹೊಂದಿದ ರಾಚಪ್ಪ ಹದನೂರ, ಮಹಾದೇವಿ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ವಿದ್ಯಾರ್ಥಿಗಳಾದ ನಿವೇದಿತಾ ಹಾಗೂ ಸಂಗಡಿಗರು ಪ್ರಾರ್ಥನೆ ಗೀತೆ ಹಾಡಿದರು. ಶಿಕ್ಷಕಿ ಶಿಲ್ಪಾ ನಿರೂಪಿಸಿದರು. ಎಸ್‌ಡಿಎಮ್‌ಸಿ ಅಧ್ಯಕ್ಷ ಮಹೇಶ ಹುಜರತಿ ಸ್ವಾಗತಿಸಿದರು. ನಂತರ ವಿದ್ಯಾರ್ಥಿಗಳಿಂದ ವಿಜ್ಞಾನ ಪ್ರದರ್ಶನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಕೋಟ್ :

ಖಾಸಗಿ ಶಾಲೆಗಳಿಗೆ ಕಮ್ಮಿಯಿಲ್ಲದಂತೆ ನಮ್ಮ ಸರಕಾರಿ ಶಾಲೆಯಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ನಮ್ಮ ಶಿಕ್ಷಕ ಸಿಬ್ಬಂದಿಗಳಿಂದ ಪ್ರೋತ್ಸಾಹಿಸಲಾಗುತ್ತದೆ.


ಮಹೇಶ ಹುಜರತಿ, ಎಸ್‌ಡಿಎಮ್‌ಸಿ ಅಧ್ಯಕ್ಷ

## ಭಕ್ತರ ಶ್ರದ್ಧಾ ಕೇಂದ್ರ ಬೀಳಗಿಯ ಕಾಶಿ ವಿಶ್ವನಾಥ

ಬೀಳಗಿ: ಶಿವರಾತ್ರಿ ನಿಮಿತ್ತ ಇಲ್ಲಿಯ ಕಾಶಿ ವಿಶ್ವನಾಥ ದೇವಾಲಯದಲ್ಲಿ ಮಾರ್ಚ್ 8ರಂದು ರಥೋತ್ಸವ ನಡೆಯಲಿದ್ದು, ಸುತ್ತಲಿನ ಹಳ್ಳಿಗಳ ಸಾವಿರಾರು ಜನ ಭಾಗವಹಿಸುತ್ತಾರೆ.

ಬೀಳಗಿಯ ಸಿಂಧೂರ ಲಕ್ಷ್ಮಣ ವೃತ್ತದಿಂದ ಎಡಭಾಗಕ್ಕೆ 2 ಕಿ.ಮೀ. ದೂರದಲ್ಲಿ ಕಾಶಿ ವಿಶ್ವನಾಥ ದೇವಾಲಯವಿದೆ. 10 ವರ್ಷಗಳ ಹಿಂದೆ ತಾಲ್ಲೂಕಿನ ವಿವಿಧ ಗ್ರಾಮಗಳ 220 ಜನ ಸೇರಿ ಕಾಶಿ ವಿಶ್ವನಾಥನ ಸನ್ನಿಧಾನಕ್ಕೆ ತೆರಳಿ ದರ್ಶನ ಪಡೆದರು. ತಮ್ಮೂರಿನ ಅನೇಕ ಬಡ ಜನರಿಗೆ ಕಾಶಿಗೆ ಬಂದು ದರ್ಶನ ಪಡೆಯುವುದು ಅಸಾಧ್ಯವಾಗಬಹುದು ಮತ್ತು ಕಾಶಿಗೆ ಹೋದ ನೆನಪು ಶಾಶ್ವತವಾಗಿ ಇರಬೇಕು ಎಂಬ ಉದ್ದೇಶದಿಂದ ಕಾಶಿಯಿಂದ ತಮ್ಮೂರಿಗೆ ಒಂದು ಲಿಂಗ ತೆಗೆದುಕೊಂಡು ಹೋಗಲು ಸಂಕಲ್ಪಿಸಿದರು. ಲಕ್ಷ್ಮಪ್ಪ ಜಂಬಗಿ ಅವರು ಲಿಂಗ ಕೊಡಿಸಿದರು. ಭಕ್ತರು ಅದನ್ನು ತೆಗೆದುಕೊಂಡು ಊರಿಗೆ ಮರಳಿದಾಗ ಬೀಳಗಿಯ ಗದಿಗೆಪ್ಪ ಕರಿಗಾರ ಅವರು ಶಿವನ ದೇವಸ್ಥಾನ ನಿರ್ಮಿಸಿ ಲಿಂಗ ಪ್ರತಿಷ್ಠಾಪಿಸಲು 11 ಗುಂಟೆ ಜಮೀನು ದೇಣಿಗೆ ನೀಡಿದರು.

ಸಮೀಪದ ಅರಭಾವಿ ಗುಡ್ಡದ ಕಲ್ಲುಗಳನ್ನು ಬಳಸಿ ಭವ್ಯ ದೇವಾಲಯ ನಿರ್ಮಿಸಿ ಕಾಶಿಯಿಂದ ತಂದ ಲಿಂಗವನ್ನು ಪ್ರತಿಷ್ಠಾಪಿಸಲಾಯಿತು. ಸದ್ಯ ವಿಶ್ವನಾಥ ಸಾವಿರಾರು ಭಕ್ತರ



ಆರಾಧ್ಯ ದೈವವಾಗಿ ನೆಲೆ ನಿಂತಿದ್ದಾರೆ. ಜಾತ್ರೆ ಸಂದರ್ಭದಲ್ಲಿ ಬೆಳಿಗ್ಗೆ ಕಾಶಿ ವಿಶ್ವನಾಥ ದೇವರ ಪೂಜೆಗೆ ಸೊನ್ನದ ಗ್ರಾಮಸ್ಥರು ಕೃಷ್ಣೆಯಿಂದ ಪವಿತ್ರ ಜಲ ತರುತ್ತಾರೆ. ಢವಳೇಶ್ವರ ಗ್ರಾಮಸ್ಥರು ಮಹಾರುದ್ರಾಭಿಷೇಕ ನೆರವೇರಿಸುತ್ತಾರೆ.

ನಾಗರಾಳ ಗ್ರಾಮದ ಗುರುರಾಜ ದೇಶಪಾಂಡೆ ಅವರಿಂದ ಹೋಮ ಹವನ ಮತ್ತಿತರ ಧಾರ್ಮಿಕ ಕಾರ್ಯಗಳು ನಡೆಯಲಿವೆ. ಜಾತ್ರೆಗೆ ಬರುವ ಭಕ್ತರಿಗಾಗಿ ಕಲಾದಗಿಯಿಂದ 20 ಕ್ವಿಂಟಲ್ ಚಿಕ್ಕು ಹಣ್ಣು, 25 ಕ್ವಿಂಟಲ್ ಖರ್ಜೂರ, ಬಾಳೆಹಣ್ಣು ಹಾಗೂ ಮಹಾಪ್ರಸಾದ ವ್ಯವಸ್ಥೆ ಕೈಗೊಳ್ಳಲಾಗುತ್ತದೆ. ಎಲ್ಲರೂ ಸೇರಿ ಭಕ್ತಿಭಾವದಿಂದ ಆಚರಿಸುವ ಜಾತ್ರೆ ಕಣ್ಮನ ಸೆಳೆಯುತ್ತದೆ.

## ಲಂಚ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದ ಕಂದಾಯ ನಿರೀಕ್ಷಕ



ಶಿವಮೊಗ್ಗ: ಉತ್ತರ ಕನ್ನಡ ಜಿಲ್ಲೆ ಹೊನ್ನಾವರದ ಪ್ರತಿಭಾ ಎಂ ನಾಯ್ಕ ಕೋಂ ಮಹೇಶ್ ನಾಯ್ಕ ಎಂಬುವವರು ನೀಡಿದ ದೂರಿನ ಹಿನ್ನೆಲೆಯಲ್ಲಿ ಇ-ಸ್ವತ್ತು ಮಾಡಿಸಲು ಲಂಚದ ಪಡೆದ ಸೊರಬ ಪುರಸಭೆ ಕಂದಾಯ ನಿರೀಕ್ಷಕ ವಿನಾಯಕ ಎಂಬುವವರನ್ನು ಲೋಕಾಯುಕ್ತ ಪೊಲೀಸರು ಇಂದು ಬಂಧಿಸಿದ್ದಾರೆ.

ಪ್ರತಿಭಾ ಎಂಬುವವರ ಹಳೇ ಸೊರಬ ಪುರಸಭೆ ವ್ಯಾಪ್ತಿಯಲ್ಲಿ ಇರುವ ಖಾಲಿ ನಿವೇಶನದ ಇ-ಸ್ವತ್ತು ಮಾಡಿಸಲು ಕಂದಾಯ ನಿರೀಕ್ಷಕ ವಿನಾಯಕರವರನ್ನು ಭೇಟಿ ಮಾಡಿ ಸೂಕ್ತ ದಾಖಲೆಯೊಂದಿಗೆ ಅರ್ಜಿ ಸಲ್ಲಿಸಿರುತ್ತಾರೆ. ಈ ಸಂದರ್ಭ ಕಂದಾಯ ನಿರೀಕ್ಷಕರು 40000/- ರೂ.ಗಳ ಲಂಚದ ಹಣಕ್ಕಾಗಿ ಬೇಡಿಕೆಯಿಟ್ಟಿದ್ದು, ಅರ್ಜಿದಾರರು ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ಸಲ್ಲಿಸಿರುತ್ತಾರೆ. ಈ ದೂರಿನನ್ವಯ ಪೊಲೀಸ್ ನಿರೀಕ್ಷಕ ಪ್ರಕಾಶ್ರವರ ತಂಡವು ಈತನನ್ನು ಲಂಚ ಪಡೆಯುವಾಗ ರೆಡ್ ಹ್ಯಾಂಡಾಗಿ ಹಿಡಿದು ಹಣವನ್ನು ಜಪ್ತಿ ಮಾಡಿ, ಅವರನ್ನು ಬಂಧಿಸಿ ತನಿಖೆಗೆ ಒಳಪಡಿಸಲಾಗಿದೆ.

## ಸಂಸದೆ ಮಂಗಳಾ ಅಂಗಡಿ ಮನೆಗೆ ನಡ್ಡಾ ಭೇಟಿ: ತೀವ್ರ ಕುತೂಹಲ ಮೂಡಿಸಿದ ಹೈಕಮಾಂಡ್ ನಡೆ

ಬೆಳಗಾವಿ: ಬೆಳಗಾವಿಯಲ್ಲಿ ಬಿಜೆಪಿಯ ವಿವಿಧ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು ಮಂಗಳವಾರ ಸಂಜೆ ಇಲ್ಲಿನ ವಿಶ್ವೇಶ್ವರಯ್ಯ ನಗರದಲ್ಲಿರುವ ಸಂಸದೆ ಮಂಗಲಾ ಅಂಗಡಿ ಮನೆಗೆ ದಿಢೀರ್ ಭೇಟಿ ನೀಡಿದ್ದು ನಾನಾ ವಿಶ್ಲೇಷಣೆಗೆ ಕಾರಣವಾಗಿದೆ.

ಕೋರ್ ಕಮಿಟಿ ಸಭೆ ಕಾರಣ ಬೆಳಗಾವಿಗೆ ಆಗಮಿಸಿದ್ದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ, ಬೆಳಗಾವಿ ಸಂಸದೆ ಮಂಗಳಾ ಅಂಗಡಿ ನಿವಾಸಕ್ಕೆ ಭೇಟಿ ನೀಡಿದ್ದು, ಶೆಟ್ಟರ್ ಟಿಕೆಟ್ ಕೈ ತಪ್ಪುತ್ತಾ ಎಂಬ ಪ್ರಶ್ನೆಗಳು ಹರಿದಾಡುತ್ತಿವೆ. ಬೆಳಗಾವಿ ಲೋಕಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಎರಡು ಮಹತ್ವದ ಸಭೆ ನಡೆದಿದ್ದು,ಸಾಕಷ್ಟು ಮಹತ್ವದ



ಚರ್ಚೆಗಳೂ ಆಗಿವೆ. ಮಹತ್ವದ ರಣತಂತ್ರಗಳನ್ನೂ ಹೆಣೆಯಲಾಗಿದೆ. ಸದ್ಯ ಬೆಳಗಾವಿ ಟಿಕೆಟ್ ಜಗದೀಶ್ ಶೆಟ್ಟರ್ಗೆ ಕೊಡೋ ಸಾಧ್ಯತೆ ಇದೆ ಅನ್ನೋ ಚರ್ಚೆ ನಡುವೆ ಮಂಗಳಾ ಅಂಗಡಿ ನಿವಾಸಕ್ಕೆ ಖುದ್ದು ನಡ್ಡಾ ಭೇಟಿ ಕೊಟ್ಟಿರೋದು ಕುತೂಹಲಕ್ಕೆ ಕಾರಣವಾಗಿದೆ.

ಒಟ್ಟಾರೆ ಲೋಕಸಭೆ ಎಲೆಕ್ಷನ್ ಡೇಟ್ ಅನೌನ್ಸ್ಗೂ ಮೊದಲೇ ಟಿಕೆಟ್ ಪಡೆಯಲು, ಗೆಲ್ಲಲು ತಂತ್ರಗಳು, ಕಸರತ್ತುಗಳು ಶುರುವಾಗಿವೆ. ಸಂಸದೆ ಅಂಗಡಿ ಮನೆಗೆ ನಡ್ಡಾ ಭೇಟಿ ವೇಳೆ ಬಿ.ವೈ ವಿಜಯೇಂದ್ರ, ಪ್ರಹ್ಲಾದ ಜೋಶಿ ಕೂಡ ಹಾಜರಿದ್ದರು. ಲೋಕಸಭೆ ಟಿಕೆಟ್ ವಿಚಾರವಾಗಿ ಒಂದಷ್ಟು ಚರ್ಚೆಯೂ ನಡೆದಿದೆ. ಭೇಟಿಯ ಬಳಿಕ ಮಾತನಾಡಿದ ಮಂಗಳಾ ಸುರೇಶ್ ನಮ್ಮ ಕುಟುಂಬಕ್ಕೆ ಟಿಕೆಟ್ ಕೊಡಿ ಅಂತಾ ಹೇಳಿದ್ದೇವೆ ಎಂದು ತಿಳಿಸಿದ್ದಾರೆ.

ಕಳೆದ ಉಪಚುನಾವಣೆಯಲ್ಲಿ ಅತ್ಯಲ್ಪ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದ ಮಂಗಲಾ ಸುರೇಶ ಅಂಗಡಿ ಅವರಿಗೆ ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಕೈತಪ್ಪ ಬಹುದು ಎಂಬ ವದಂತಿ ಹರಡಿದೆ. ಈ ನಿಟ್ಟಿನಲ್ಲಿ ಮಂಗಲಾ ಅಂಗಡಿ ಅವರು ಜಯಪ್ರಕಾಶ್ ನಡ್ಡಾ ಅವರನ್ನು ಭೇಟಿ ಆಗಿರುವುದು ನಾನಾ ಚರ್ಚೆಗಳಿಗೆ ಕಾರಣವಾಗಿದೆ. ಮಂಗಲಾ ಅಂಗಡಿಯವರ ಪತಿ ದಿ.ಸುರೇಶ ಅಂಗಡಿ ಅವರು ಕಳೆದ ಎರಡೂವರೆ ದಶಕಗಳಿಂದ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಹಿಡಿತ ಸಾಧಿಸಿದ್ದಾರೆ. ಈ ಬಲವಾದ ಹಿಡಿತವನ್ನು ಮುಂದುವರಿಸಿಕೊಂಡು ಹೋಗುವ ತಂತ್ರವಾಗಿ ಮಂಗಲಾ ಅಂಗಡಿ ಇದೀಗ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿಯಾಗಿರುವ ಸಾಧ್ಯತೆಗಳು ಇವೆ. ಯಾವುದೇ ಕಾರಣಕ್ಕೂ ಬೆಳಗಾವಿ ಲೋಕಸಭಾ ಕ್ಷೇತ್ರದ ಟಿಕೆಟ್ ಅನ್ಯರ ಪಾಲಾಗಬಾರದು ಎಂಬ ಪರೋಕ್ಷ ಸಂದೇಶವನ್ನು ಅವರು ರವಾನಿಸಿದಂತಿದೆ.

NEWS

ಬೆಳಗಾವಿ ವರದಿ

THURSDAY, 07 MARCH 2024

# ಕೃಷಿಕರಿಗೆ ಕೃಷಿ ಸಲಕರಣೆಗಳ ವಿತರಣೆ; ಬೆಂಬಲ ಬೆಲೆ ಕಾಯ್ದೆ ಜಾರಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

ಬೆಳಗಾವಿ: "ದೇಶದ ಆಹಾರ ಸ್ವಾವಲಂಬನೆಗೆ ಶ್ರಮಿಸುತ್ತಿರುವ ರೈತರಿಗೆ ಬೆಂಬಲ ಬೆಲೆ ಕೊಡುವುದು ಸರಕಾರದ ಕರ್ತವ್ಯವಾಗಿದೆ. ದೇಶದಾದ್ಯಂತ ಕನಿಷ್ಠ ಬೆಂಬಲ ಬೆಲೆ (ಎಂ. ಎಸ್.ಪಿ.) ಕಾಯ್ದೆ ಜಾರಿಗೆ ರೈತರು ಹೋರಾಟ ನಡೆಸುತ್ತಿದ್ದಾರೆ. ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಎಂ.ಎಸ್.ಪಿ. ಕಾಯ್ದೆ ಜಾರಿಗೆ ತರಲಾಗುವುದು" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಕೃಷಿ ಇಲಾಖೆಯ ಆಶ್ರಯದಲ್ಲಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಗುರುವಾರ(ಮಾ. 6) ನಡೆದ ಕಾರ್ಯಕ್ರಮದಲ್ಲಿ ಬೆಳಗಾವಿ ವಿಭಾಗದ ಫಲಾನುಭವಿ ರೈತರಿಗೆ ವಿವಿಧ ಕೃಷಿ ಸಲಕರಣೆಗಳು ಮತ್ತು ಸೌಲಭ್ಯಗಳನ್ನು ವಿತರಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 223 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಇದರಲ್ಲಿ 196 ತಾಲ್ಲೂಕುಗಳು ತೀವ್ರ ಬರಪೀಡಿತವಾಗಿವೆ.

ಒಟ್ಟಾರೆ 18,171 ಕೋಟಿ ಬೆಳೆಹಾನಿಯಾಗಿದ್ದು, ಪರಿಹಾರ ಒದಗಿಸುವಂತೆ ಕೋರಿ ಕೇಂದ್ರ ಸರಕಾರಕ್ಕೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಯಾವುದೇ ರೀತಿಯ ನೆರವು ನೀಡಿಲ್ಲ ಎಂದು ಹೇಳಿದರು.

ರೈತರಿಗೆ ತಲಾ 2 ಸಾವಿರದಂತೆ ರಾಜ್ಯ ಸರಕಾರ ತಾತ್ಕಾಲಿಕವಾಗಿ 631 ಕೋಟಿ ರೂಪಾಯಿ ನೆರವು ನೀಡಿದೆ.

ಹಿಂದಿನ ಸರಕಾರದ ಅವಧಿಯಲ್ಲಿ ಜಾರಿಗೆ ತರಲಾಗಿದ್ದ ಕೃಷಿಹೊಂಡ ಯೋಜನೆಯನ್ನು ಕೂಡ ಇದಕ್ಕೂ ಮುಂಚಿನ ಸರಕಾರ ಸ್ಥಗಿತಗೊಳಿಸಿತ್ತು. ಈ ಬಾರಿ 200 ಕೋಟಿ ರೂಪಾಯಿ ಒದಗಿಸುವ ಮೂಲಕ ಕೃಷಿಭಾಗ್ಯ ಯೋಜನೆಗೆ ಮರುಚಾಲನೆ ನೀಡಲಾಗಿದೆ.

**900 ಕೋಟಿ ಮೊತ್ತದ ಕೃಷಿ ಸಲಕರಣೆ ವಿತರಣೆ:**

ಬೆಳಗಾವಿ ವಿಭಾಗಮಟ್ಟದಲ್ಲಿ 2700 ರೈತರಿಗೆ 13.12 ಕೋಟಿ ರೂಪಾಯಿ ಮೊತ್ತದ ವಿವಿಧ ಬಗೆಯ ಕೃಷಿ ಸಲಕರಣೆಗಳನ್ನು ನೀಡಲಾಗುತ್ತಿದೆ. ಇದೇ ರೀತಿ ರಾಜ್ಯದಾದ್ಯಂತ ಒಟ್ಟಾರರ 900 ಕೋಟಿಗಿಂತ ಅಧಿಕ ಮೊತ್ತದ ಸಲಕರಣೆಗಳನ್ನು ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಆಧುನಿಕ ಯಂತ್ರೋಪಕರಣಗಳ ಮೂಲಕ ಕೃಷಿ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲು ಸಹಾಯಧನದ ಮೂಲಕ ಸಲಕರಣೆಗಳನ್ನು ನೀಡಲಾಗುತ್ತಿದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ರೈತರಿಗೆ ಆಧುನಿಕ ಬೇಸಾಯ ಪದ್ಧತಿ ಅಳವಡಿಸಿಕೊಳ್ಳಲು ಅನುಕೂಲವಾಗಲಿದೆ ಎಂದರು.

ಸೂಕ್ಷ್ಮ ನೀರಾವರಿ ಅಳವಡಿಸಿಕೊಂಡಿರುವ ರೈತರಿಗೂ ಸಬ್ಸಿಡಿ ಆಧಾರಿತ ಯಂತ್ರೋಪಕರಣ ನೀಡಲಾಗುತ್ತಿದೆ. ಸಮಗ್ರ ಕೃಷಿ ಪದ್ಧತಿ ಅಭಿವೃದ್ಧಿಗೆ ಸರಕಾರ ಪ್ರೋತ್ಸಾಹ ನೀಡುತ್ತಿದೆ.

ನೀರಾವರಿ, ಕೃಷಿ ಪದ್ಧತಿ, ಬೆಳೆಗೆ ನ್ಯಾಯಯುತ ಬೆಲೆ ಒದಗಿಸುವುದು ಸೇರಿದಂತೆ ರೈತರ ಹಿತರಕ್ಷಣೆಗೆ ಸರಕಾರ ಬದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, "ಸೈನಿಕ, ಕಾರ್ಮಿಕ, ಶಿಕ್ಷಕ




ಹಾಗೂ ರೈತರು ಸಮಾಜದ ಆಧಾರಸ್ತಂಭ. ರೈತರ ಬದುಕು ಹಸನಾಗಿಸಲು ಕೃಷಿ ಇಲಾಖೆಯ ವತಿಯಿಂದ ಹತ್ತಾರು ಹೊಸ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕಬ್ಬು ಕಟಾವು ಯಜತ್ರ, ಟ್ರ್ಯಕ್ಟರ್ ಸೇರಿದಂತೆ ಕೋಟ್ಯಂತರ ಮೊತ್ತದ ಸಲಕರಣೆಗಳನ್ನು ನೀಡಲಾಗುತ್ತಿದೆ" ಎಂದು ಹೇಳಿದರು.

ಸುವರ್ಣ ಸೌಧ ಆವರಣದಲ್ಲಿ ರೈತರಿಗೆ ಕೃಷಿ ಸಲಕರಣೆಗಳನ್ನು ನೀಡುತ್ತಿರುವುದು ಸೌಭಾಗ್ಯ. ಎಪಿಎಂಸಿ ಕಾಯ್ದೆ ವಾಪಸ್ ಪಡೆಯುವುದಾಗಿ ಚುನಾವಣೆ ವೇಳೆ ಭರವಸೆ ನೀಡಿದಂತೆ ಪರಿಷ್ಕೃತ ಕಾಯ್ದೆಗೆ ಅನುಮೋದನೆ ಪಡೆಯಲಾಗಿದೆ.

ರೈತರಿಗೆ ಆರ್ಥಿಕ ಶಕ್ತಿ ತುಂಬುವ ಕೆಲಸವನ್ನು ಸರಕಾರ ಮಾಡುತ್ತಿದೆ. ಉತ್ತರ ಕರ್ನಾಟಕ ಭಾಗದಲ್ಲೂ ರೇಷ್ಮೆ ಹೆಚ್ಚಾಗಿ ಬೆಳೆಯುತ್ತಿರುವುದು ಒಳ್ಳೆಯ ಬೆಳವಣಿಗೆ. ಬೆಳಗಾವಿಯಲ್ಲಿ ಕಬ್ಬು, ಹಣ್ಣು, ತರಕಾರಿ ಬೆಳೆ ಸೇರಿದಂತೆ ಹೈನುಗಾರಿಕೆ ಹೆಚ್ಚಾಗುತ್ತಿರುವುದು ರೈತರಿಗೆ ಅನುಕೂಲವಾಗುತ್ತಿದೆ.

ಐದು ಗ್ಯಾರಂಟಿ ಬಲಪಡಿಸಲು ಕೈಗೆ ಶಕ್ತಿ ತುಂಬಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜನರಿಗೆ ಮನವಿ ಮಾಡಿಕೊಂಡರು.

ಕುಡಿಯುವ ನೀರಿನ ಯೋಜನೆಯಾಗಿರುವ ಕಳಸಾ-ಬಂಡೂರಿ ಸೇರಿದಂತೆ ರಾಜ್ಯದ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರಕಾರ ಬದ್ಧವಿದೆ. ಜನರ ಸಹಕಾರ ಇದ್ದರೆ ಇದು ಸಾಧ್ಯವಾಗಲಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ಇಲಾಖೆಯ ಸಚಿವರಾದ ಎನ್.ಚಲುವರಾಯಸ್ವಾಮಿ ಅವರು, ರೈತರು ಸಂಕಷ್ಟದಲ್ಲಿರುವುದರಿಂದ ಯಾವುದೇ ಸಂದರ್ಭದಲ್ಲಿಯೂ ಅವರಿಗೆ ತೊಂದರೆಯಾಗದಂತೆ ಹೆಚ್ಚು ಹೆಚ್ಚು ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ರಾಜ್ಯದಲ್ಲಿ ಇದುವರೆಗೆ 2.5 ಲಕ್ಷ ರೈತರಿಗೆ ತುಂತು ನೀರಾವರಿ ಘಟಕ ನೀಡಲಾಗಿದ್ದು, ಇನ್ನೊಂದು ತಿಂಗಳಿನಲ್ಲಿ 1 ಲಕ್ಷ ಘಟಕಗಳನ್ನು ನೀಡಲಾಗುವುದು ಎಂದು ತಿಳಿಸಿದರು.

ಬೆಳಗಾವಿ ವಿಭಾಗದ ಮಟ್ಟದ ಕಾರ್ಯಕ್ರಮದಲ್ಲಿ 2763 ರೈತರಿಗೆ 13 ಕೋಟಿ ಮೊತ್ತದ ಕೃಷಿ ಸಲಕರಣೆಗಳನ್ನು ನೀಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಬರಗಾಲದಿಂದ ತತ್ತರಿಸಿರುವುದರಿಂದ ಕೇಂದ್ರ ಸರಕಾರದ ನೆರವು ಕೋರಿ ಹತ್ತಾರು ಪತ್ರ ಬರೆದರೂ ಯಾವುದೇ ರೀತಿಯ ನೆರವು ಲಭಿಸಿಲ್ಲ ಎಂದು ಚಲುವರಾಯಸ್ವಾಮಿ ತಿಳಿಸಿದರು. ಸರಕಾರ ಬರೀ ಗ್ಯಾರಂಟಿ ಯೋಜನೆಗಳಿಗೆ ಸೀಮಿತಗೊಳ್ಳದೇ ರೈತರು ಸೇರಿದಂತೆ ಎಲ್ಲ ವರ್ಗದ ಜನರ ನೆರವು ನೀಡುತ್ತಿದೆ. ಎಂತಹದ್ದೇ ಕಷ್ಟ ಎದುರಾದರೂ ಸರಕಾರ ರೈತರ ಜತೆಗಿರುತ್ತದೆ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದರು.

ಬೆಳಗಾವಿ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆಯ ಸಚುವರಾದ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕರಾದ ಆಸಿಫ್(ರಾಜು) ಸೇಠ್, ಸವದತ್ತಿ ಶಾಸಕ ವಿಶ್ವಾಸ್ ವೈದ್ಯ, ಕಿತ್ತೂರು ಶಾಸಕ ಬಾಬಾಸಾಹೇಬ್ ಪಾಟೀಲ, ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ, ಬಾಗಲಕೋಟೆ ಶಾಸಕ ಎಚ್.ವೈ.ಮೇಟಿ, ಕೃಷಿ ಇಲಾಖೆಯ ಕಾರ್ಯದರ್ಶಿ ಅನ್ಬುಕುಮಾರ್ ಮತ್ತಿತರರು ಉಪಸ್ಥಿತರಿದ್ದರು.ಕೃಷಿ ಆಯುಕ್ತರಾದ ವೈ. ಎಸ್.ಪಾಟೀಲ ಅವರು ಸ್ವಾಗತಿಸಿದರು.

**ಕೂರಿಗೆ, ನೇಗಿಲು ಮತ್ತಿತರ ಸಲಕರಣೆ ವಿತರಣೆ:**

ಮುಖ್ಯಮಂತ್ರಿಗಳು ವಿಭಾಗದ ವ್ಯಾಪ್ತಿಯ ಏಳು ಜಿಲ್ಲೆಯ 2700 ರೈತರಿಗೆ 13.12 ಕೋಟಿ ರೂಪಾಯಿ ಮೊತ್ತದ ವಿವಿಧ ಬಗೆಯ ಕೃಷಿ ಸಲಕರಣೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿತರಿಸಿದರು.

ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ ಸಾಲು ಸಾಲಾಗಿ ಜೋಡಿಸಿ ಇಡಲಾಗಿದ್ದ ಕೂರಿಗೆ, ನೇಗಿಲು, ಟ್ರ್ಯಕ್ಟರ್, ಶುಗರ್ ಕೇನ್ ಹಾರ್ವೆಸ್ಟರ್, ಮೇವು ಕಟಾವು ಯಂತ್ರ, ಪವರ್ ಟಿಲ್ಲರ್, ರೋಟೋವೇಟರ್, ಹನಿ ಮತ್ತು ತುಂತುರು ನೀರಾವರಿ ಘಟಕದ ಸಲಕರಣೆಗಳನ್ನು ರೈತ ಫಲಾನುಭವಿಗಳಿಗೆ ವಿತರಿಸಲಾಯಿತು. ಕೃಷಿ ಇಲಾಖೆಯ ಸಚಿವರಾದ ಎನ್.ಚಲುವರಾಯಸ್ವಾಮಿ ಸೇರಿದಂತೆ ಎಲ್ಲ ಜನಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಸಕ್ಕರೆ ಕಾರ್ಖಾನೆಗೆ ಸಾಗಿಸುವ ಕಬ್ಬು ತೂಕ ಮಾಡಲು ಡಿಜಿಟಲ್ ಯಂತ್ರ ಅಳವಡಿಸಲು ಆಯವ್ಯದಲ್ಲಿ ಘೋಷಿಸಿರುವ ಹಿನ್ನೆಲೆಯಲ್ಲಿ ರೈತ ಸಂಘದ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು. ಬೆಳಗಾವಿ ವಿಭಾಗದ ವ್ಯಾಪ್ತಿಯ ಏಳು ಜಿಲ್ಲೆಗಳ ರೈತ ಫಲಾನುಭವಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಅಪರಿಚಿತ ಶವ ಪತ್ತೆ



ಬೆಳಗಾವಿ: ಘಟಪ್ರಭಾ-ಚಿಕ್ಕೋಡಿ ರೋಡ ರೈಲು ನಿಲ್ದಾಣಗಳ ಮದ್ಯೆ ರೈಲು ಹಳಿಯಲ್ಲಿ ಮಾ.6 (ಬುಧವಾರ) ರಂದು ಅಪರಿಚಿತ ಶವ ಪತ್ತೆಯಾಗಿದೆ. ಯಾವುದೋ ಒಂದು ಚಲಿಸುವ ರೈಲುನ ಗಾಡಿಯಿಂದ ಬಿದ್ದು ಮೃತಪಟ್ಟಿರುತ್ತಾನೆ.

ಮೃತನ ಚಹರೆ: ಮೃತನ ವಯಸ್ಸು 35 ಇರಬಹುದು ಎಂದು ಅಂದಾಜಿಸಲಾಗಿದ್ದು, 5-6 ಎತ್ತರ, ಸಾದ ಕೆಂಪು ಮೈ ಬಣ್ಣ, ಮೈಯಿಂದ ಸದೃಡ, ದುಂಡು ಮುಖ, ದುಂಡನೇಯ ಮೂಗು, ತಲೆಯಲ್ಲಿ ಕಪ್ಪು ಕೂದಲು, ಎಡಗೈ ರಟ್ಟೆಯ ಮೇಲೆ ಮರಾಠಿಯಲ್ಲಿ ಸಂದೀಪ್ ರಾವಸಾಹೇಬ್ ಅಂತಾ ಬಲಗೈ ಮೇಲೆ ಬಾಳು ಆಯಿ ಅಂತಾ ಹಚ್ಚೆ ಗುರುತು ಇರುತ್ತದೆ. ಮೃತನು ತಿಳಿ ಹಸಿರು ಬಣ್ಣದ ಟಿ-ಶರ್ಟ್, ನೀಲಿ ಜೀನ್ಸ್ ಪ್ಯಾಂಟ್, ಬಿಳಿ ಬನಿಯನ್, ನೀಲಿ ಬಣ್ಣದ ಶೂ, ಕಪ್ಪು ಮತ್ತು ಆರೇಂಜ್ ಬೆಲ್ಟ್ ಧರಿಸಿರುತ್ತಾನೆ. ಸದರಿ ಮೃತನ ವಾರಸುದಾರರು ಕಂಡು ಬಂದಲ್ಲಿ ಬೆಳಗಾವಿ ರೈಲ್ವೆ ಪೋಲಿಸ್ ಠಾಣೆ ದಾರವಾಣಿ 0831-2405273, 08022871291 ಅಥವಾ ಪಿಎಸ್ಐ ಮೊಬೈಲ್ ನಂ:9480802127 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ

ಬೆಳಗಾವಿ: ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಅನುದಾನದ ವತಿಯಿಂದ ಕುವೆಂಪು ನಗರದ ಚಿಕ್ಕುಬಾಗ್ ಹಾಗೂ ಪಾರ್ವತಿ ಲೇಔಟ್ ನ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಬುಧವಾರ ಚಾಲನೆ ನೀಡಿದರು.

ಕುವೆಂಪು ನಗರದ ರಸ್ತೆ, ಉದ್ಯಾನವನ, ಗಟಾರ, ಯೋಗಾ ಸೆಂಟರ್ ಹಾಗೂ ಫೇವರ್ಸ್ ಅಳವಡಿಕೆಯ ಅಭಿವೃದ್ಧಿ



ಕಾಮಗಾರಿಗಳಿಗೆ ಸಚಿವರು ಭೂಮಿ ಪೂಜೆ ನೆರವೇರಿಸಿದರು. ಎಲ್ಲ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಮತ್ತು ವಿಳಂಬವಿಲ್ಲದೆ ಪೂರ್ಣಗೊಳಿಸಬೇಕು ಎಂದು ಸಚಿವರು ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಮಯದಲ್ಲಿ ಸ್ಥಳೀಯ ನಿವಾಸಿಗಳು, ಗೀತಾ ಉಸುಲ್ಕರ್, ಪ್ರಿಯಾಂಕಾ ಉಸುಲ್ಕರ್, ಸುನೀತಾ ಉಸುಲ್ಕರ್, ರೇಣುಕಾ ಉಸುಲ್ಕರ್, ಲಕ್ಷ್ಮೀ ಉಸುಲ್ಕರ್, ಮಾಲನ್ ಉಸುಲ್ಕರ್, ನೂತನ್ ಉಸುಲ್ಕರ್, ಮಾಧುರಿ ಬಂಡಾಚೆ, ಸೋನಾಲಿ ಕಿಲ್ಲೇಕರ್, ಭಾರತಿ ಜೈನಕೋಪ್, ರೋಹಿಣಿ ರಾಜಣ್ಣವರ್, ಶೃತಿ ಬಂಡಿವಾಡೇಕರ್, ದೀಪಾ ಅಇಥಣಿಕರ್, ರೂಪಾ ಪಾಟೀಲ, ಅಶ್ವಿನಿ ಪಾಟೀಲ, ಜಾಕಲಿನ್ ಫರ್ನಾಂಡೀಸ್, ಉಮಾಕಾಂತ ಯರಗಟ್ಟಿ ಮುಂತಾದವರು ಉಪಸ್ಥಿತರಿದ್ದರು.

## ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ನೂತನ ಕುಲಪತಿ ನೇಮಕ



ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ನೂತನ ಕುಲಪತಿಯಾಗಿ ವಾಣಿಜ್ಯ ಶಾಸ್ತ್ರ ವಿಭಾಗದ ಡೀನ್, ಎಂಬಿಎ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಸಿ.ಎಂ.ತ್ಯಾಗರಾಜ್ ಅವರನ್ನು ಅವರನ್ನು ರಾಜ್ಯಪಾಲ ತಾವರಚಂದ ಗೆಹಲೋಟ್ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಮುಂದಿನ ನಾಲ್ಕು ವರ್ಷಗಳ ಅವಧಿಗೆ ಈ ನೇಮಕಾತಿ ಮಾಡಲಾಗಿದೆ.

ಮೂಲತಃ ಚಿಕ್ಕಮಗಳೂರಿವರಾದ ತ್ಯಾಗರಾಜ್ ಅವರು ಶಿವಮೊಗ್ಗ, ಬೆಂಗಳೂರು, ಬೆಳಗಾವಿ ವಿಶ್ವವಿದ್ಯಾಲಯದಲ್ಲಿ ಹಿರಿಯ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದಾರೆ.

## ರಾಷ್ಟ್ರೀಯ ಸೇವಾ ಯೋಜನೆಯ ಸಮಾರೋಪ ಸಮಾರಂಭ

ಕೆಂಭಾವಿ: ರಕ್ತದಾನ, ನೇತ್ರದಾನ, ಬಹು ಅಂಗಾಂಗ ದಾನಕ್ಕಿಂತ ಶ್ರೇಷ್ಠವಾದುದು ಶ್ರಮದಾನ ಅಂತಹ ಶ್ರಮ ಸಂಸ್ಕೃತಿಯ ಆರಾಧಕರು ಇಂದಿನ ಯುವಶಕ್ತಿ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಶ್ರೀ ಚನ್ನಬಸವ ಶಿವಾಚಾರ್ಯರು ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ಬಹು ಸಂಸ್ಕೃತಿ ಭಾರತದಲ್ಲಿ ಶ್ರಮವೇ ಜಯತೇ ಎನ್ನುತ್ತಾ, ವಿದ್ಯಾರ್ಥಿಗಳು ಮಾನವೀಯ ಮೌಲ್ಯಗಳ ಜೊತೆ ಶಿಸ್ತು, ಸಂಯಮ, ಸಮಯ, ಪ್ರಜ್ಞೆ ಹಾಗೂ ದೇಶ ಭಾಷಾಭಿಮಾನ ಬೆಳೆಸಿಕೊಂಡು ಕಲ್ಯಾಣ ನಾಡು ಕಟ್ಟಲು ಮುಂದಾಗುವ ಮೂಲಕ ಭವ್ಯ ಭಾರತದ ನಿರ್ಮಾತೃಗಳು ನೀವು ಆಗಬೇಕು ಎಂದು ಆಶಿಸಿದರು.



ಮುಖ್ಯ ಅತಿಥಿಯಾಗಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ವೀರೇಂದ್ರ ಧರಿ ಮಾತನಾಡಿ ವಿದ್ಯಾರ್ಥಿಗಳು ಪ್ರಾಯೋಗಿಕ ಮತ್ತು ವೈಜ್ಞಾನಿಕತೆಗೆ ಹೆಚ್ಚು ಆದ್ಯತೆ ನೀಡುತ್ತಾ, ಬಸವಾದಿ ಶಿವಶರಣರು ಕೊಟ್ಟ ಕಾಯಕ ದಾಸೋಹ ಪರಂಪರೆಗೆ ಕಳಸ ಪ್ರಾಯರಾಗಿ ನಾಳೆ ನಾಡ ನಾಯಕರಾಗುವಂತೆ ಕರೆ ನೀಡಿದವರು. ಏನು? ಏಕೆ? ಹೇಗೆ? ಎಲ್ಲಿ? ಯಾವಾಗ?ಯಾರು? ಎಂಬುದನ್ನು ಪ್ರಶ್ನಿಸುವುದರ ಜೊತೆಯಲ್ಲಿ ಗುರು ಹಿರಿಯರನ್ನು ಗೌರವಿಸುವ ಗುಣ ನಿಮ್ಮದಾಗಲಿ ಎಂದರು.

ಸಮಾರೋಪ ಭಾಷಣ ಮಾಡಿದ ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಡಾ ಸಿದ್ದಲಿಂಗ ರಾಠೋಡ್ ಏಳು ದಿನಗಳ ಕಾಲ ಶಿಬಿರವನ್ನು ಅಚ್ಚುಕಟ್ಟಾಗಿ ಆಯೋಜಿಸಿಕೊಂಡು ಬರುವಲ್ಲಿ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿ, ಮತ್ತು ಶಿಬಿರಾರ್ಥಿಗಳು ಸಹಕಾರಕ್ಕೆ ಧನ್ಯವಾದ ಅರ್ಪಿಸಿದರು. ಪ್ರಾಂಶುಪಾಲ ಡಾ ನಾಗಪ್ಪ ಚವಲ್ಕರ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉಪನ್ಯಾಸಕ ಮಲ್ಲಣ್ಣ ಬಿಳೇಬಾವಿ ಹಾಗೂ ಶಿಬಿರಾರ್ಥಿಗಳು ಮಾತನಾಡಿದರು. ಡಾ ನಂದಾ ವಾರದ ಡಾ ಬಸಮ್ಮ ನಸ್ರೀನ್ ತಾಜಾ, ಪಾರ್ವತಿ, ಡಾ ಪ್ರಸಾದ ಭಂಡಾರಿ, ಡಾ ಯಂಕನಗೌಡ ಎಸ್ ಪಾಟೀಲ, ಶರಣಪ್ಪ ನಡಕೂರ, ಸಂದೀಪ್ ಸಂಶಿಕರ, ಡಾ ಸುರೇಶ ಪಾಟೀಲ, ಡಾ ಆನಂದ ರೇವಡಿ, ಶರಣಬಸವ ಅಂಗಡಿ, ಮಲ್ಲಿಕಾರ್ಜುನ ಕಲಾಲ್, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ದತ್ತಿ ಪ್ರಶಸ್ತಿಗೆ ಕೃತಿಗಳ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ದತ್ತಿ ಪ್ರಶಸ್ತಿಗಳಿಗೆ ಲೇಖಕಿಂ-ಯರಿಂದ ಕೃತಿಗಳನ್ನು ಆಹ್ವಾನಿಸಿದೆ.

ಬೆಳಗಾವಿ ಜಿಲ್ಲೆಯ ಲೇಖಕಿಯರಿಂದ 2023 ರಲ್ಲಿ ಪ್ರಕಟಗೊಂಡ ಕೃತಿಗಳನ್ನು 1) ಜ್ಯೋತಿ ಬದಾಮಿ, ದತ್ತಿ ಪ್ರಶಸ್ತಿ ಗದ್ಯ ಪ್ರಕಾರದ ಕೃತಿಗೆ 2) ಸುಧಾ ಪಾಟೀಲ ದತ್ತಿ ಪ್ರಶಸ್ತಿ ಕವನ ಸಂಕಲನಕ್ಕೆ 3) ರೋಹಿಣಿ ಯಾದವಾಡ ದತ್ತಿ ಪ್ರಶಸ್ತಿ ಪ್ರಥಮ ಕವನ ಸಂಕಲನಕ್ಕೆ 4) ಇಂದಿರಾ ಮೋಟೆಬೆನ್ನೂರ ದತ್ತಿ ಪ್ರಶಸ್ತಿ ಕಥಾ ಸಂಕಲನಕ್ಕೆ 5) ಪ್ರಭಾ ಪಾಟೀಲ ದತ್ತಿ ಪ್ರಶಸ್ತಿ ಕಥಾ ಸಂಕಲನಕ್ಕೆ 6) ವಿದ್ಯಾ ಹುಂಡೇಕರ ದತ್ತಿ ಪ್ರಶಸ್ತಿ ಮಹಿಳಾ ಅಥವಾ ಮಕ್ಕಳ ಮೇಲಿನ ಕೃತಿಗೆ ಹೀಗೆ ವಿವಿಧ ದತ್ತಿ ಪ್ರಶಸ್ತಿಗಳಿಗಾಗಿ ಆಹ್ವಾನಿಸಲಾಗಿದೆ.

ರಾಜ್ಯ ಮಟ್ಟದ ಡಾ.ಹೇಮಾವತಿ ಸೊನೊಳ್ಳಿ ದತ್ತಿ ಪ್ರಶಸ್ತಿಗಾಗಿ ಕರ್ನಾಟಕ ರಾಜ್ಯ ಲೇಖಕಿಯರಿಂದ 2023 ರಲ್ಲಿ ಪ್ರಕಟಗೊಂಡ ಕಾದಂಬರಿ ಕೃತಿಯನ್ನು ಆಹ್ವಾನಿಸಲಾಗಿದೆ.

ಕೃತಿಯ ತಲಾ ಎರಡು ಪ್ರತಿಗಳು ಹಾಗೂ ವಿಳಾಸ ಸಹಿತ ಅಗತ್ಯ ವಿವರವನ್ನು 30-03-24 ರ ಒಳಗೆ ಜಯಶೀಲ ಬ್ಯಾಕೋಡ್ 634 5ನೇ ಸೆಕ್ಟರ್ ಡಬಲ್ ರೋಡ್ , ಶ್ರೀನಗರ, ಎಂ.ಎಂ. ಎಕ್ಸ್ ಟೆನಶನ್, ಬೆಳಗಾವಿ-16 ಈ ವಿಳಾಸಕ್ಕೆ ಕಳುಹಿಸಬೇಕು ಎಂದು ಸಂಘದ ಅಧ್ಯಕ್ಷೆ ಜಯಶೀಲ ಬ್ಯಾಕೋಡ್ ಅವರು ತಿಳಿಸಿದ್ದಾರೆ.

## ವಿವಾಹ ವಾರ್ಷಿಕೋತ್ಸವಕ್ಕೆ ಗಿಫ್ಟ್ ಕೊಟ್ಟಿಲ್ಲವೆಂದು ಗಂಡನಿಗೆ ಚಾಕು ಇರಿದ ಪತ್ನಿ

ಬೆಂಗಳೂರು: ಮದುವೆ ವಾರ್ಷಿಕೋತ್ಸವಕ್ಕೆ ಗಂಡ ಗಿಫ್ಟ್ ಕೊಟ್ಟಿಲ್ಲ ಎಂದು ಪತ್ನಿ ಚಾಕು ಇರಿದ ಘಟನೆ ಬೆಳ್ಳಂದೂರಿನಲ್ಲಿ ನಡೆದಿದೆ. ಫೆ.27 ರಂದು ರಾತ್ರಿ ನಡೆದಿರುವ ಘಟನೆ ಇದಾಗಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಮದುವೆ ವಾರ್ಷಿಕೋತ್ಸವ ಹಿನ್ನೆಲೆ ಗಂಡ ನಿದ್ದೆಗೆ ಜಾರಿದ್ದನು. ಇದರಿಂದ ಕೋಪಗೊಂಡಿದ್ದ ಹೆಂಡತಿ ಮಧ್ಯರಾತ್ರಿ 1:30 ರ ಸುಮಾರಿಗೆ ಚಾಕುವಿನಿಂದ ಇರಿದಿದ್ದಾಳೆ. ಗಂಡ ಮಲಗಿ ನಿದ್ದೆ ಮಾಡುತ್ತಿದ್ದ ವೇಳೆ ಅಡುಗೆ ಮನೆಯಿಂದ ಚಾಕು ತಂದ ಪತ್ನಿ ಆತನಿಗೆ ಇರಿದಿದ್ದಾಳೆ. ಚಾಕುವಿನಿಂದ ಇರಿದ



ಹಿನ್ನೆಲೆ ಪತಿಯ ಕೈಗೆ ಗಾಯವಾಗಿದೆ. ಕೂಡಲೇ ಸ್ಥಳೀಯರ ಸ'ಹಾಂು'ದಿಂದ' ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆ ಸಂಬಂಧ ಬೆಳ್ಳಂದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸದ್ಯ ಗಂಡ ಮತ್ತು ಹೆಂಡತಿಯನ್ನು ಪೊಲೀಸರು ಕೌನ್ಸಲಿಂಗ್ ನಡೆಸಿದ್ದಾರೆ.

ತನಿಖೆ ವೇಳೆ ಮೊದಲ ಬಾರಿಗೆ ಗಿಫ್ಟ್ ನೀಡಿಲ್ಲ ಎಂಬ ಸಂಗತಿ ಬಯಲಾಗಿದೆ. ಹೀಗಾಗಿ ಕೃತ್ಯವೆಸಗಿರುವುದಾಗಿ ಹೆಂಡತಿ ಒಪ್ಪಿಕೊಂಡಿದ್ದಾಳೆ. ಆದರೆ ಗಂಡ ತನ್ನ ತಾತ ತೀರಿ ಹೋಗಿದ್ದ ಕಾರಣ ಗಿಫ್ಟ್ ನೀಡಲು ನಿರಾಕರಿಸಿರೋದಾಗಿ ಒಪ್ಪಿಕೊಂಡಿದ್ದಾನೆ.

## ಭೀಕರ ಅಪಘಾತ: ಪಲ್ಟಿ ಹೊಡೆದ ಕಾರು; ವಕೀಲ ಸ್ಥಳದಲ್ಲೇ ಸಾವು

ಕೋಲಾರ: ರಸ್ತೆ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿರುವ ಭೀಕರ ಅಪಘಾತ ಶ್ರೀನಿವಾಸಪುರ ತಾಲ್ಲೂಕಿನ ಅವಗಾನಪಲ್ಲಿ ಗ್ರಾಮದ ಬಳಿ ನಡೆದಿದೆ. ದುರಂತದಲ್ಲಿ 40 ವರ್ಷದ ಮುಬಾರಕ್ ಪಾಷಾ ಎಂಬ ವಕೀಲ ಮೃತಪಟ್ಟಿದ್ದಾರೆ.

ವಕೀಲ ಮುಬಾರಕ್ ಪಾಷ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ಪಟ್ಟಣದ ನಿವಾಸಿ. ರಸ್ತೆ ತಿರುವಿನಲ್ಲಿ ಕಾರು ನಿಯಂತ್ರಣ ತಪ್ಪಿ ರಸ್ತೆ ಬದಿಯ ಚರಂಡಿಗೆ ಬಿದ್ದು ಪಲ್ಟಿ ಹೊಡೆದಿದೆ. ಕೂಡಲೇ ಸ್ಥಳೀಯರು ಅಪಘಾತದ ಸ್ಥಳಕ್ಕೆ ಬಂದು ಚಾಲಕನ ಬದುಕಿಸೋ ಪ್ರಯತ್ನ ಮಾಡಿದ್ದಾರೆ.



ಕಾರು ಪಲ್ಟಿಯಾಗಿ ಕಾರಿನಲ್ಲಿದ್ದ ವಕೀಲನಿಗೆ ಗಂಭೀರ ಗಾಯಗಳಾಗಿದ್ದು, ಸ್ಥಳೀಯರ ಸಹಾಯದೊಂದಿಗೆ ಶ್ರೀನಿವಾಸಪುರ ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಆಸ್ಪತ್ರೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದು ವ್ಯಕ್ತಿ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ. ಗೌನಿಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಷ್ಯಾ ದೇಶದಲ್ಲಿ ವೈದ್ಯಕೀಯ ಶಿಕ್ಷಣ ನೀಡುವ ನಿಟ್ಟಿನಲ್ಲಿ ಪೆನ್ಜಾ ಸ್ಟೇಟ್ ಯೂನಿವರ್ಸಿಟಿಯೊಂದಿಗೆ ಚೆವಲಿಯರ್ ಗ್ರೂಪ್ ನ ವಿಶೇಷ ಒಡಂಬಡಿಕೆ

ಬೆಂಗಳೂರು, ಮಾ, 6; ರಷ್ಯಾ ದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆಯಲು ಇಚ್ಚಿಸುವ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ, ದೇಶದ ಪ್ರಮುಖ ಬಹುರಾಷ್ಟ್ರೀಯ ನಿಗಮವಾಗಿರುವ ಚೆವಲಿಯರ್ ಗ್ರೂಪ್ ರಷ್ಯಾ ದೇಶದ ಪೆನ್ಜಾ ಸ್ಟೇಟ್ ಯೂನಿವರ್ಸಿಟಿಯೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ ಎಂದು ಚೆವೆಲಿಯರ್ ಗ್ರೂಪ್ ನ ಸಂಸ್ಥಾಪಕರು ಮತ್ತು ಸಿಇಒ ಡಾ. ಯುವರಾಜ್ ಸಿಂಗ್ ಸೋಲಂಕಿ ತಿಳಿಸಿದರು.

ಈ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ನಾನು ರಷ್ಯಾದಲ್ಲಿ ಅಧ್ಯಯನ ಮಾಡಿದ್ದು, ನನಗೆ 20 ವರ್ಷಗಳ ಅನುಭವವಿದೆ. ಅಲ್ಲದೇ, ಪೆನ್ಜಾ ಸ್ಟೇಟ್ ಯೂನಿವರ್ಸಿಟಿಯ ಗೌರವ ಉಪನ್ಯಾಸಕರು ಮತ್ತು ಸಲಹೆಗಾರ ಆಗಿಯೂ ಕಾರ್ಯನಿರ್ವಹಿಸುತ್ತಿದ್ದೇನೆ. ಈ ವಿವಿ ಕೇವಲ ಎಂಬಿಬಿಎಸ್ ಶಿಕ್ಷಣಕ್ಕೆ ವಿದ್ಯಾರ್ಥಿಗಳನ್ನು ಭರ್ತಿಮಾಡಿಕೊಳ್ಳುವುದಷ್ಟೇ ಅಲ್ಲದೇ ವಿದ್ಯಾರ್ಥಿಗಳಿಗೆ ಸಮಗ್ರ ಬೆಂಬಲ ಮತ್ತು ವೈದ್ಯಕೀಯ ಶಿಕ್ಷಣದ ಸಮಯದಲ್ಲಿ ಸೂಕ್ತ ಮಾರ್ಗದರ್ಶನ ಮಾಡುವ ಕಾರ್ಯದಲ್ಲಿ ನಿರತವಾಗಿದೆ ಎಂದರು.

2013-2023 ರ ದಶಕದಲ್ಲಿ 370 ವಿದ್ಯಾರ್ಥಿಗಳು ಪೆನ್ಜಾ ಸ್ಟೇಟ್ ಯೂನಿವರ್ಸಿಟಿಯಿಂದ ಪದವಿ ಪಡೆದಿದ್ದು, 1200 ಕ್ಕೂ ಅಧಿಕ ವಿದ್ಯಾರ್ಥಿಗಳ ಶೈಕ್ಷಣಿಕ ಯಶಸ್ಸಿನಲ್ಲಿ ಪ್ರಮುಖ ಪಾತ್ರ ವಹಿಸಿದೆ. ಈ ಪೈಕಿ 245 ವಿದ್ಯಾರ್ಥಿಗಳು ಯಶಸ್ವಿಯಾಗಿ ವಿದೇಶಿ ವೈದ್ಯಕೀಯ ಪದವಿ ಪರೀಕ್ಷೆ [ಎಫ್. ಎಂ.ಜಿ.ಇ] ಯಲ್ಲಿ ಉತ್ತೀರ್ಣರಾಗಿದ್ದು, ತೇರ್ಗಡೆ ಪ್ರಮಾಣ ಶೇ 65% ರಷ್ಟಿದೆ.




65 ಮಂದಿ ವೈದ್ಯರು ಸ್ನಾತಕೋತ್ತರ ಕೋರ್ಸ್ ಗಳಿಗೆ ಪ್ರವೇಶ ಪಡೆದಿದ್ದಾರೆ. ಇದು ಚೆವೆಲಿಯರ್ ಗ್ರೂಪ್ ನೊಂದಿಗೆ ಸಹಭಾಗಿತ್ವ ಹೊಂದಿರುವ ಪೆನ್ಜಾ ಸ್ಟೇಟ್ ಯೂನಿವರ್ಸಿಟಿಯ ಶೈಕ್ಷಣಿಕ ಉತ್ಕೃಷ್ಟತೆ ಮತ್ತು ಗುಣಮಟ್ಟದ ಶಿಕ್ಷಣಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಹಿತ ರಕ್ಷಣೆ ಚೆವೆಲಿಯರ್ ಗ್ರೂಪ್ ನ ಪ್ರಧಾನ ಆದ್ಯತೆಯಾಗಿದ್ದು, ವಿದ್ಯಾರ್ಥಿಯ ಪ್ರತಿಯೊಂದು ಶೈಕ್ಷಣಿಕ ಆಯಾಮಗಳನ್ನು ಎಚ್ಚರಿಕೆಯಿಂದ ನಿರ್ವಹಿಸುತ್ತದೆ. ದಾಖಲಾತಿ ಸಲ್ಲಿಕೆಯಿಂದ ಹಿಡಿದು ಪ್ರವೇಶ ಪ್ರಕ್ರಿಯೆಯ ಪ್ರತಿಯೊಂದು ಚಟುವಟಿಕೆಯನ್ನು ಸಮರ್ಥವಾಗಿ ನಿಭಾಯಿಸುತ್ತಿದೆ. ವಸತಿ ನಿಲಯದ ಕೊಠಡಿ ಮಂಜೂರಾತಿ, ವಿವಿಗೆ ಭೇಟಿ, ಹೀಗೆ ಸಣ್ಣ ವಿಷಯಗಳಲ್ಲಿಯೂ ಸಹ ವಿದ್ಯಾರ್ಥಿಗಳಿಗೆ ನೆರವಾಗುತ್ತಿದೆ. ಪೆನ್ಜಾದಲ್ಲಿ ಚೆವೆಲಿಯರ್ ಗ್ರೂಪ್ ಎರಡು ಭಾರತೀಯ ವಸತಿ ನಿಲಯಗಳು ಮತ್ತು ಮೂರು ಹೋಟೆಲ್ ಗಳನ್ನು ನಡೆಸುತ್ತಿದ್ದು, ಮೂರು ಹೊತ್ತು ಭಾರತೀಯ ವಿದ್ಯಾರ್ಥಿಗಳಿಗೆ ಊಟದ ವ್ಯವಸ್ಥೆ ಮಾಡಿದೆ. ವೈದ್ಯಕೀಯ ತುರ್ತುಪರಿಸ್ಥಿತಿ ಸಂದರ್ಭಗಳಲ್ಲಿ ವೈದ್ಯಕೀಯ ನೆರವು ಒದಗಿಸುತ್ತಿದೆ ಎಂದು ವಿವರಿಸಿದರು.

ದಕ್ಷಿಣ ಭಾರತದಲ್ಲಿ ಚೆವಲಿಯರ್ ಗ್ರೂಪ್‌ನ ಅಧಿಕೃತ ಪಾಲುದಾರ ಖಖಿ&ಅಖ ಕಗಿಖ ಐಖಿಆ, ನ ವ್ಯವಸ್ಥಾಪಕ ನಿರ್ದೇಶಕರಾದ ಕ್ಷತ್ರಧಾರಿ ಮಂಡಲ್ ಮಾತನಾಡಿ, ಚೆವೆಲಿಯರ್ ಗ್ರೂಪ್ ಮುಂದಿನ ಪೆನ್ಜಾ ಸ್ಟೇಟ್ ಯೂನಿವರ್ಸಿಟಿಯ ಪರೀಕ್ಷೆಗೆ ಭಾರತೀಯ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲು 10 ಮಂದಿ ಖ್ಯಾತ ಬೋಧಕ ಸಿಬ್ಬಂದಿಯನ್ನು ಸಹ ನಿಯೋಜಿಸಿದೆ. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅರ್ಹತೆ ಹೆಚ್ಚಾಗುವ ಜೊತೆಗೆ ತಮ್ಮ ಅಧ್ಯಯನದಲ್ಲಿ ವಿಶೇಷತೆ ಸಾಧಿಸಲು ಸಾಧ್ಯವಾಗಲಿದೆ.

ಚೆವೆಲಿಯರ್ ಗ್ರೂಪ್ ಇದೀಗ ವಡೋದರದ ಪರ್ಲ್ ವಿಶ್ವವಿದ್ಯಾಲಯದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದ್ದು, ಪೆನ್ಜಾ ಸ್ಟೇಟ್ ಯೂನಿರ್ವಸಿಟಿಯ ಪ್ರಾಯೋಗಿಕ ಕಾರ್ಯಕ್ರಮಗಳನ್ನು ಇಲ್ಲಿ ನಡೆಸಲಾಗುತ್ತಿದೆ. ವೈದ್ಯಕೀಯ ಶಿಕ್ಷಣದ ಭವಿಷ್ಯದ ಸವಾಲುಗಳನ್ನು ಎದುರಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸನ್ನದ್ಧರಾಗಲು ನೆರವಾಗುತ್ತಿದೆ ಎಂದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089